ವಿಜಯಪುರ | ಸಂಪುಟ 04 | ಸಂಚಿಕೆ 176 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಸೆಪ್ಟೆಂಬರ್, 04, 2026

ಕುಮಾರಸ್ವಾಮಿಗೆ ನಿದ್ದೆ ಬರ್ತಿಲ್ಲ, ಅದಕ್ಕಾಗಿ ಸುಮ್ಮನೆ ಕೆಣ-ಕುತ್ತಿದ್ದಾರೆ. ಈ ಕಡೆ ಹೊರಳಿದರೆ ಸಿಎಂ ಡಿಕೆ ಶಿವಕುಮಾರ್ ಕಾಣಿಸ್ತಾರೆ, ಆ ಕಡೆ ಹೊರಳಿದರೆ ನಾನು ಮತ್ತು ಬಾಲಕೃಷ್ಣ ಕಾಣಿಸುತ್ತೇವೆ. ನಮ್ಮ ಪಕ್ಷ ನನಗೆ ನೀರಾವರಿ ಖಾತೆ ಕೊಟ್ಟಿದೆ. ಅವರಿಗೆ ಅದನ್ನು ಸಹಿಸಿಕೊಳ್ಳಲಾಗುತ್ತಿಲ್ಲ."



■ ಎನ್.ಚಲುವರಾಯಸ್ವಾಮಿ ಸಚಿವರು



## ಮಲ್ಲಯ್ಯ ದೇಗುಲ ಮುಂದೆ ನೈರ್ಮಲ್ಯ ಕಾಪಾಡಲು ಸಮಿತಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಐತಿಹಾಸಿಕ ಮಲ್ಲಯ್ಯನ ದೇವಸ್ಥಾನದ ಮುಂದೆ ಸರ್ವೇ ನಂ 864/2ರ ಜಾಗೆಯಲ್ಲಿನ ಶೌಚಾಲಯದ ನೀರು ಬರುತ್ತಿದ್ದು, ಪಟ್ಟಣ ಪಂಚಾಯಿತಿ ಈ ಕುರಿತು ಕ್ರಮ ಕೈಗೊಳ್ಳಲು ಆಗ್ರಹಿಸಿ ದೇವಸ್ಥಾನ ಸಮಿತಿ ಸದಸ್ಯರು ಮುಖ್ಯಾಧಿಕಾರಿ ಅಫ್ರೋಜ್ ಅಹ್ಮದ್ ಪಟೇಲರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಪಂಚಾಯಿತಿ ಕಾರ್ಯಾಲಯಕ್ಕೆ ಬುಧವಾರ ಆಗಮಿಸಿದ ರಾವುತರಾಯ-ಮಲ್ಲಯ್ಯ ದೇವಸ್ಥಾನ ಸಮಿತಿ ಸದಸ್ಯರು ಶೌಚಾಲಯ ನೀರು ಹರಿಯುವ ಕುರಿತು ಗಮನ ಸೆಳೆದರು.

ಈ ಸಂದರ್ಭದಲ್ಲಿ ಸಮಿತಿ ಅಧ್ಯಕ್ಷ ವಿನೋದಗೌಡ ಪಾಟೀಲ ಮಾತನಾಡಿ, ಸರ್ವೇ ನಂ864/2 ರಲ್ಲಿನ ವಿನಾಯಕ ಲಾಜ್‌ನ ಸ್ನಾನ ಮತ್ತು ಶೌಚಾಲಯದ ಮಲೀನ ನೀರು ಮಲ್ಲಯ್ಯನ ದೇವಸ್ಥಾನದ ಮುಂದೆ ಬರುತ್ತಿದ್ದು , ಇದರಿಂದ ಬರುವ ಭಕ್ತಾಧಿಗಳು ಮೂಗು ಮುಚ್ಚಿಕೊಂಡು ಬರುವಂತಾಗಿದೆ. ದೇವಾಲಯ ಪವಿತ್ರ ಯಾತ್ರಾ ಸ್ಥಳವಾಗಿರುವುದ-ರಿಂದ ಶೌಚಾಲಯದ ಮಲಮೂತ್ರ ತ್ಯಾಜ್ಯ ಮತ್ತು ಸ್ನಾನದ ನೀರು ಜೊತೆಗೆ ಮದ್ಯದಂಗಡಿಯ ಸರಾಯಿ ಬಾಟಲುಗಳು ದೇವಾಲಯದ ಮುಂದೆ ಬರುತ್ತಿವೆ. ಆದ ಕಾರಣ ನಮ್ಮ ಸಮಿತಿಯ ಎಲ್ಲ ಸದಸ್ಯರು ಹಾಗೂ ದೇವಸ್ಥಾನದ ಸಕಲ ಸದ್ಭಕ್ತರು ಮನವಿ ಮೇರೆಗೆ ಕೂಡಲೇ ಪಂಚಾಯಿತಿಯವರು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ದೇವಸ್ಥಾನ ಸಮಿತಿ ಉಪಾಧ್ಯಕ್ಷ ಶ್ರೀಧರ ನಾಡಗೌಡ, ಯಮನಪ್ಪ ಸಣ್ಣಕ್ಕಿ, ಬಾಬು ಸೌದಿ, ಪ್ರಕಾಶ ಮಲ್ಲಾರಿ, ರಾಜು ಮೆಟಗಾರ, ಆನಂದ ವಗ್ಗರ ಇದ್ದರು.

## ರಾಷ್ಟ್ರೀಯ ಹೆದ್ದಾರಿ ತಡೆದು ಅನ್ನದಾತರ ಆಕ್ರೋಶ



■ ಉದಯರಶ್ಮಿ ದಿನಪತ್ರಿಕೆ

ಚಡಚಣ: ವಿಜಯಪುರ ಜಿಲ್ಲೆಯ ಇಂಡಿ ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಯಿಂದ ಕೈಬಿಟ್ಟಿರುವ ಸರ್ಕಾರದ ಕ್ರಮವನ್ನು ಖಂಡಿಸಿ, ಜೆಡಿ-ಎಸ್ ಮುಖಂಡ ಬಿ.ಡಿ. ಪಾಟೀಲ ನೇತೃತ್ವದಲ್ಲಿ ಪಕ್ಷಾತೀತವಾಗಿ ರೈತಪರ ಹಾಗೂ ಕನ್ನಡಪರ ಸಂಘಟನೆಗಳ ಮುಖಂಡರು ಮತ್ತು ಸಾವಿರಾರು ರೈತರು ಝಳಕಿ ರಾಷ್ಟ್ರೀಯ ಹೆದ್ದಾರಿ ಬಳಿ ಗುರುವಾರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ತಾಲೂಕಿನ ವಾಸ್ತವ ಪರಿಸ್ಥಿತಿಯನ್ನು ಅರಿಯದೆ ನಿದ್ರಾವಸ್ಥೆಯಲ್ಲಿರುವ ಶಾಸಕರನ್ನು ಎಚ್ಚರಿಸುವ ಸಮಯ ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಮುಖಂಡ ಬಿ.ಡಿ. ಪಾಟೀಲ ಮತ್ತು ವಿಜಯಪುರ ಜಿಲ್ಲಾ ಬಿಜೆಪಿ ಯುವ ಮೊರ್ಚಾ ಅಧ್ಯಕ್ಷ ರಾಘವೇಂದ್ರ ಕಾಪಸೆ, ಮಾಜಿ ಶಾಸಕ ರವಿಕಾಂತ ಪಾಟೀಲ, ಬಿಜೆಪಿ ಮುಖಂಡ ಕಾಸುಗೌಡ ಬಿರಾದಾರ ಮಾತನಾಡಿ, ಇಂಡಿ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸಿ, ರೈತರ ಸಾಲಮನ್ನಾ ಮಾಡಬೇಕು, ಪ್ರತಿ ಎಕರೆಗೆ ರೂ. 50 ಸಾವಿರ ಪರಿಹಾರ ನೀಡಬೇಕು, ಅಗತ್ಯವಿರುವ ಕಡೆ ಗೋಶಾಲೆ ಆರಂಭಿಸಬೇಕು ಹಾಗೂ ಬಾಕಿ ಇರುವ ಬೆಳೆ ವಿಮೆ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ನಂತರ ಪ್ರತಿಭಟನಾಕಾರರು ಉಪತಹಶೀಲ್ದಾರ್ ಆನಂದ ಪಮ್ಮಾರ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಶೀಲವಂತ ಉಮರಾಣಿ, ಎಂ.ಎಂ.ಎಸ್. ಪಾಟೀಲ, ಮರೇಪ್ಪ ಗಿರಣಿವಡ್ಡರ, ರವಿ ವಗ್ಗೆ, ಅಯೂಬ್ ನಾಟೀಕರ, ಬಾಳು ಮುಳಜಿ, ಗುರುನಾಥ ಬಗಲಿ, ವಿಜಯಕುಮಾರ ಭೋಸಲೆ, ನಾಗನಾಥ ಬಿರಾದಾರ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

## ಪ್ರಜಾಸೇವಾ ಆಂದೋಲನಕ್ಕೆ ಪೂರ್ವ ಸಿದ್ಧತೆ ಕೈಗೊಳ್ಳಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸೆ.5ರಂದು ಚಡಚಣ ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗುತ್ತಿರುವ ಪ್ರಜಾಸೇವಾ ಆಂದೋಲನದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಅವರು ಚಡಚಣ ಪಟ್ಟಣಕ್ಕೆ ಭೇಟಿ ನೀಡಿ ಕಾರ್ಯಕ್ರಮದ ಪೂರ್ವ ಸಿದ್ಧತೆಗಳನ್ನು ಪರಿಶೀಲಿಸಿದರು.

ಪ್ರಜಾಸೇವಾ ಆಂದೋಲನದ ಮೂಲಕ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಇಲಾಖೆಗಳ ಸೇವೆಗಳನ್ನು ಒಂದೇ ವೇದಿಕೆಯಲ್ಲಿ ಸುಲಭವಾಗಿ ಒದಗಿಸುವ ಉದ್ದೇಶ ಹೊಂದಲಾಗಿದ್ದು, ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು

### ಕೆಪಿಎಸ್ಸಿ ನೇಮಕಾತಿ ಅಕ್ರಮಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ನಡುವೆ ವಾಕ್ಸಮರ । ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಸಾಧ್ಯತೆ

## ಕೆಪಿಸಿಸಿ ಹಗರಣ: ಎಚ್ಡಿಕೆ ವಿರುದ್ಧವೇ ಪ್ರಾಸಿಕ್ಯೂಷನ್ ಅಸ್ತ್ರ?

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್ ಸಿ)ದ ನೇಮಕಾತಿ ಅಕ್ರಮಗಳಿಗೆ ಸಂಬಂಧಿಸಿದಂತೆ ಆಡಳಿತರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ವಾಕ್ಸಮರ ನಡೆಯುತ್ತಿದ್ದು, ಇದೀಗ ರಾಜ್ಯ ಸರ್ಕಾರ ಸಾಲು ಸಾಲು ಆರೋಪಗಳನ್ನು ಮಾಡುತ್ತಿರುವ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರ ವಿರುದ್ಧವೇ ಪ್ರಾಸಿಕ್ಯೂಷನ್ ಅಸ್ತ್ರ ಪ್ರಯೋಗಿಸಲು ಮುಂದಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ನಿನ್ನೆಯಷ್ಟೇ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಈ ಹಿಂದೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್(ಖಆಕಖ) ಸಚಿವರಾಗಿದ್ದಾಗ ನಡೆದ ಸಹಾಯಕ ಕಾರ್ಯಪಾಲಕ ಎಂಜಿನಿಯರ್(ಂಇಇ) ನೇಮಕಾತಿಯಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದರು. ಇದರ ಮಧ್ಯೆ, ಇಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಕುಮಾರಸ್ವಾಮಿ ವಿರುದ್ಧವೂ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡುವ ಬಗ್ಗೆ ಚರ್ಚೆಯಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ. ನಾಗೇಂದ್ರ ವಿರುದ್ಧ ಸಿಬಿಐ ತನಿಖೆಗೆ ಪ್ರಾಸಿಕ್ಯೂಷನ್ ಅನುಮತಿಗೆ ರಾಜ್ಯಪಾಲರು, ರಾಜ್ಯ ಸರ್ಕಾರದ ಅಭಿಪ್ರಾಯ ಕೇಳಿದ್ದಾರೆ. ಹೀಗಾಗಿ ನಾಗೇಂದ್ರ ನೆಪದಲ್ಲಿ ಕುಮಾರಸ್ವಾಮಿ ವಿರುದ್ಧವೂ ಸಿಬಿಐ ತನಿಖೆಗೆ ಶಿಫಾರಸು ಮಾಡುವ ಸಾಧ್ಯತೆ ಇದೆ.



ಕುಮಾರಸ್ವಾಮಿ ವಿರುದ್ಧ ಸಿಬಿಐ ತನಿಖೆಗೆ ಶಿಫಾರಸು ಮಾಡೋದಕ್ಕಾಗಿ ರಾಜ್ಯಪಾಲರ ಮೇಲೆ ಒತ್ತಡ ತರೋದಕ್ಕೂ ರಾಜ್ಯ ಸರ್ಕಾರದ ಕಾರ್ಯತಂತ್ರ ರೂಪಿಸಿದೆ ಎಂದು ಮೂಲಗಳು ತಿಳಿಸಿವೆ.

ನಾಗೇಂದ್ರ ಅವರ ಜೊತೆಗೆ ಕುಮಾರಸ್ವಾಮಿ, ಜನಾರ್ದನ ರೆಡ್ಡಿ, ರೇಣುಕಾಚಾರ್ಯ ಅವರ ಫೈಲ್‌ಗಳಿಗೂ ರಾಜ್ಯ ಸರ್ಕಾರ ಅಭಿಪ್ರಾಯ ನೀಡುತ್ತಾ ಎಂಬುದು ಕುತೂಹಲ ಮೂಡಿಸಿದೆ.

### ಯಾವ ತನಿಖೆ ಬೇಕಾದರೂ ಮಾಡಿಕೊಳ್ಳಲಿ :ಎಚ್ಡಿರೆ

ಇನ್ನು ನಿಮ್ಮ ವಿರುದ್ಧ ಪ್ರಾಸಿಕ್ಯೂಷನ್ ನಡಸೋ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚೆ ನಡೆಯುತ್ತಿದೆ ಎಂದು ಸುದ್ದಿಗಾರರು ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಗಮನ ಸೆಳೆದಾಗ, "ನನ್ನ ಮೇಲೆ ಯಾವ ತನಿಖೆ ಬೇಕಾದರೂ ಮಾಡಿಕೊಳ್ಳಲಿ. ಎಷ್ಟು ವರ್ಷ ಬೇಕಾದರೂ ತನಿಖೆ ಮಾಡಲಿ. ಅದರಲ್ಲಿ ಏನೂ ಇಲ್ಲ. ಆ ಪ್ರಕರಣದಲ್ಲಿ ಏನೇನು ಇಲ್ಲವೆಂದು ಎಲ್ಲರಿಗೂ ಗೊತ್ತಿದೆ. ಆದರೂ ಅದನ್ನು ಇಟ್ಟುಕೊಂಡು ನನ್ನ ಬಾಯಿ ಮುಚ್ಚಿಸಲು ಪ್ರಯತ್ನ ಮಾಡುತ್ತಲೇ ಇದ್ದಾರೆ" ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ತಿರುಗೇಟು ನೀಡಿದ್ದಾರೆ.

## ಹೆಚ್ಚುವರಿ ಬಸ್ ಸಂಚಾರಕ್ಕೆ ಗಡಿ ಗ್ರಾಮಗಳ ವಿದ್ಯಾರ್ಥಿಗಳ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಎಸ್.ಎಂ.ಮಾಳಿ

ವಿಜಯಪುರ: ಒಂದೇ ಬಸ್ಸಿನಲ್ಲಿ ನೂರಾರು ವಿದ್ಯಾರ್ಥಿಗಳು ಮತ್ತು ಪ್ರಯಾಣಿಕರು ತಾಲೂಕು ಕೇಂದ್ರಕ್ಕೆ ತೆರಳಲು ತೊಂದರೆಯಾಗುತ್ತಿದ್ದು, ಹೆಚ್ಚುವರಿ ಬಸ್ ಓಡಿಸುವಂತೆ ವಿದ್ಯಾರ್ಥಿಗಳು ಆಗ್ರಹಿಸುತ್ತಿದ್ದಾರೆ. ಜಿಲ್ಲೆಯ ಚಡಚಣ ತಾಲೂಕಿನ ರೇವತಗಾಂವ ಗ್ರಾಮದಿಂದ ಚಡಚಣ ಪಟ್ಟಣಕ್ಕೆ ತೆರಳುತ್ತಿದ್ದ ಬಸ್‌ನಲ್ಲಿ ಹೆಚ್ಚಾಗಿ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳು ತುಂಬಿದ್ದರಿಂದ ಹಲವಾರು ವಿದ್ಯಾರ್ಥಿಗಳು ಬಸ್ ಹತ್ತಲು ಸಾಧ್ಯವಾಗದಂತಾಗಿದೆ. ಪ್ರತಿನಿತ್ಯ ಚಡಚಣ ಪಟ್ಟಣದಿಂದ ಗಡಿಭಾಗದಲ್ಲಿರುವ ಹಾಲಳ್ಳಿ, ಶಿರಾಡೋಣ, ರೇವತಗಾಂವ, ಉಮರಜ ಹಾಗೂ ದಸೂರ ಮಾರ್ಗವಾಗಿ ಓಡಾಡುವ ಸಾರಿಗೆ ಬಸ್‌ನಲ್ಲಿ ನೂರಾರು ವಿದ್ಯಾರ್ಥಿಗಳು ಪ್ರಯಾಣಿಸುತ್ತಾರೆ. ಹೀಗಾಗಿ ಈಗಾಗಲೇ ಹಾಲಳ್ಳಿ ಮತ್ತು ಶಿರಾಡೋಣ ಗ್ರಾಮಕ್ಕೆ ಹೆಚ್ಚುವರಿ ಬಸ್ಸೊಂದನ್ನು ಓಡಿಸಲಾಗುತ್ತಿದೆ. ಇನ್ನುಳಿದ ಉಮರಜ, ದಸೂರ ಹಾಗೂ ರೇವತಗಾಂವ ಗ್ರಾಮಗಳ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಾರಿಗೆ ಸವಲತ್ತು ಇಲ್ಲದ ಕಾರಣ ಶಾಲಾ-ಕಾಲೇಜು ವಿದ್ಯಾರ್ಥಿಗಳು ಮತ್ತು ಪ್ರಯಾಣಿಕರು ಒಂದೇ ಬಸ್ಸಿನಲ್ಲಿ ಜೋತು ಬಿದ್ದು ಹೋಗುವ ಪ್ರಸಂಗ ನಡೆದಿದೆ. ಒಂದು ಬಸ್‌ನಲ್ಲಿ ಕೇವಲ 52 ಜನ ಪ್ರಯಾಣಿಸಬೇಕು. ಆದರೆ ಇಲ್ಲಿ ಈಗ 120ಕ್ಕೂ ಅಧಿಕ ಜನರು ಪ್ರಯಾಣಿಸುತ್ತಿದ್ದಾರೆ. ಇದ-ರಿಂದ ವಯೋವೃದ್ಧರಿಗೆ, ಮಹಿಳೆಯರಿಗೆ, ವಿಶೇಷ ಚೇತನ-ರಿಗೆ, ವಿದ್ಯಾರ್ಥಿನಿಯರಿಗೆ ತೀವ್ರ ತೊಂದರೆಯಾಗುತ್ತಿದ್ದು, ಸಾರಿಗೆ ಅಧಿಕಾರಿಗಳು ಕೂಡಲೇ ಚಡಚಣ ಪಟ್ಟಣದಿಂದ ರೇವತಗಾಂವ ಗ್ರಾಮಕ್ಕೆ ಪ್ರತಿದಿನ ಹೆಚ್ಚುವರಿ ಬಸ್ ಓಡಿಸಬೇಕು ಎಂದು ಆಗ್ರಹಿಸುತ್ತಿದ್ದಾರೆ.



■ ಶಕ್ತಿ ಯೋಜನೆಯಿಂದ ಪ್ರಯಾಣಿಕರ ಸಂಖ್ಯೆ ದುಪ್ಪಟ್ಟು । ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬಸ್ ಸೌಕರ್ಯ ಒದಗಿಸಲು ಒತ್ತಾಯ

"ಸರ್ಕಾರ ಶಕ್ತಿ ಯೋಜನೆ ಜಾರಿಗೊಳಿಸಿದ ಬಳಿಕ ಪ್ರಯಾಣಿಕರ ಸಂಖ್ಯೆ ದುಪ್ಪಟ್ಟಾಗಿದೆ. ಹೆಚ್ಚುವರಿ ಬಸ್ ಓಡಿಸುತ್ತಿಲ್ಲ. ನಿತ್ಯ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪರದಾಡುವ ದುಸ್ಥಿತಿ ಎದುರಾಗಿದೆ. ಕಾರಣ ಚಡಚಣ ತಾಲೂಕು ಕೇಂದ್ರದಿಂದ ರೇವತಗಾಂವ ಗ್ರಾಮಕ್ಕೆ ಹೆಚ್ಚುವರಿ ಬಸ್ ಓಡಿಸಬೇಕು."

■ ತೇಜಶ್ವಿನಿ ಮಾಳಿ ವಿದ್ಯಾರ್ಥಿನಿ

### ಚವನಭಾವಿ ರೈತರಿಂದ ಸರಕಾರಕ್ಕೆ ಆಗ್ರಹ । ರೈತ ಮುಖಂಡ ಯಮನಪ್ಪ ನಾಯ್ಕೋಡಿ ಆಕ್ರೋಶ


## ಕೆರೆ ತುಂಬಿಸಿ ಕುಡಿವ ನೀರಿನ ಸಮಸ್ಯೆ ನೀಗಿಸಲು ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಮಲಗಲದಿನ್ನಿ ಕೆರೆಗೆ ಕಾಲುವೆ ನೀರು ಹರಿಸಿ ತುಂಬಿಸುವುದರಿಂದ ಪಕ್ಕದ ಚವನಭಾವಿ ಹಳ್ಳದ ಬ್ಯಾರೇಜ್ ಭರ್ತಿಯಾಗಿ ಅಂತರ್ಜಲ ಮಟ್ಟ ಹೆಚ್ಚುತ್ತದೆ. ಇದರಿಂದ ಸುತ್ತಮುತ್ತಲಿನ ಗ್ರಾಮಗಳ ಜನ-ಜಾನುವಾರುಗಳಿಗೆ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆ ನೀಗಲಿದೆ. ಆದರೆ ಸರ್ಕಾರದ ಸ್ಪಷ್ಟ ನಿರ್ದೇಶನವಿದ್ದರೂ ಕೆಬಿಜೆಎನ್‌ಎಲ್ ಅಧಿಕಾರಿಗಳು ಸಮರ್ಪಕ ನಿರ್ವಹಣೆ ಮಾಡದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ರೈತ ಮುಖಂಡ ಯಮನಪ್ಪ ನಾಯ್ಕೋಡಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಗೆ ಮಂಗಳವಾರ ಆಗಮಿಸಿದ ಚವನಭಾವಿ ಗ್ರಾಮದ ರೈತರು ಹಾಗೂ ಮುಖಂಡರು, ಶಿರಸ್ತೇದಾರ ಎಂ.ಎ.ಬಾಗೇವಾಡಿ ಅವರ ಮೂಲಕ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದರು.

ಪ್ರಸ್ತುತ ಭೀಕರ ಬರಗಾಲದ ಹಿನ್ನೆಲೆಯಲ್ಲಿ ಬೆಳೆಗಳು ಕೈಕೊಟ್ಟಿವೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಕನಿಷ್ಠ ಕುಡಿಯುವ ನೀರನ್ನಾದರೂ ಒದಗಿಸುವುದು ಜಿಲ್ಲಾಡಳಿತದ ಕರ್ತವ್ಯವಾಗಿದೆ. ಈ ಕುರಿತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದರು.



ಒಂದು ವಾರದೊಳಗೆ ಮಲಗಲದಿನ್ನಿ ಕೆರೆಗೆ ನೀರು ತುಂಬಿಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹ-ರಿಸದಿದ್ದರೆ ನಾಲತವಾಡಮುದ್ದೇಬಿಹಾಳ ಸಂಪರ್ಕಿಸುವ ಮಲಗಲದಿನ್ನಿ ಕ್ರಾಸ್ ಬಳಿ ರಾಜ್ಯ ಹೆದ್ದಾರಿ ತಡೆದು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ರೈತರು ಎಚ್ಚರಿಕೆ ನೀಡಿದರು. ಈ ವೇಳೆ ಮುಖಂಡರಾದ ಭರಣ್ಣ ಹಂಚಿನಾಳ, ರೇವಣ್ಣಪ್ಪ ಹಂಚಿನಾಳ, ಶರಣಪ್ಪ ಮುರಾಳ, ಗೋವಿಂದಪ್ಪಗೌಡ ಪಾಟೀಲ, ಸಿದ್ದಪ್ಪ ಮದರಿ, ಪ್ರಚಂಡ ಚಲವಾದಿ, ದ್ಯಾಮಣ್ಣ ಮುರಾಳ, ವೀರೇಶ ಜಂಗಡಭಾವಿ, ಸಿದ್ದಪ್ಪ ಹಂಚಿನಾಳ, ನಿಂಗಪ್ಪ ಮಾವಿನಭಾವಿ, ಲಕ್ಷ್ಮಣ ಗುರಿಕಾರ, ಬಸಣ್ಣ ನಾಯ್ಕೋಡಿ, ನಿಂಗಪ್ಪ ಜಂಗಡಭಾವಿ, ನಿಂಗಪ್ಪ ಮದರಿ, ಹುಲಗಪ್ಪ ಜಂಗಡಭಾವಿ, ಬಸಪ್ಪ ನಾಲತವಾಡ, ಮಾಳಪ್ಪ ಬಿರಾದಾರ, ಬೀರಪ್ಪ ಸೋಮನಾಳ, ನೀಲಪ್ಪ ಮುರಾಳ ಸೇರಿದಂತೆ ಚವನಭಾವಿ ಗ್ರಾಮದ ರೈತರು ಹಾಗೂ ಸಾರ್ವಜನಿಕರು ಇದ್ದರು.

### ಭಾರತ ಕಮ್ಯುನಿಸ್ಟ್ ಪಕ್ಷ (ಮ್ಯಾರ್ಕ್ಸವಾದಿ) ವತಿಯಿಂದ ಮುಖ್ಯಮಂತ್ರಿ ಗೆ ಮನವಿ

## ವಿಜಯಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸವಾದಿ) ವತಿಯಿಂದ ವಿಜಯಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಣೆ ಮಾಡುವಂತೆ ಆಗ್ರಹಿಸಿ ಪದಾಧಿಕಾರಿಗಳು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅವರ ಮುಖಾಂತರ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಪಕ್ಷದ ಜಿಲ್ಲಾ ಕಾರ್ಯದರ್ಶಿ ಭೀಮರಾಯ ಪೂಜಾರಿ ಮಾತನಾಡಿ, ವಿಜಯಪುರ ಸಂಪೂರ್ಣ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಬೇಕು ಹಾಗೂ ಬರ ಪರಿಹಾರ ಕೆಲಸಗಳು ಪ್ರಾರಂಭಿಸಬೇಕು. ಪ್ರತಿ ಎಕರೆಗೆ ಬೆಳೆ ಹಾನಿ ಎಂದು 50 ಸಾವಿರ ರೂ.ಗಳು ರೈತರಿಗೆ ನೀಡುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇ-ರಿಕೆಗೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅಣ್ಣಾರಾಯ ಇಳಗೇರ, ಲಕ್ಷ್ಮಣ ಹಂದ್ರಾಳ, ಸುರೇಶ ಜಿ ಬಿ, ಸುರೇಖಾ ರಜಪೂತ್, ಖಾಜಾಸಾಬ್ ಕೋಲಾರ್, ಸಾಯಬಣ್ಣ ಹಂದಿಗನೂರ, ಗೋಪಾಲ ಶೀವಗದ್ದಿಗೆ, ರೇವಣಸಿದ್ದ ಪೂಜಾರಿ, ಮಹೇಶ ಗದ್ದಿಗೆ ಮತ್ತಿತರರು ಉಪಸ್ಥಿತರಿದ್ದರು.





# ಇಂಡಿಯಲ್ಲಿ ಮುಂದುವರೆದ ಬಿಜೆಪಿ ಧರಣಿ ಸತ್ಯಾಗ್ರಹ

**ಇಂಡಿ ತಾಲೂಕು ಬರ ಪ್ರದೇಶವೆಂದು ಘೋಷಿಸಲು ಆಗ್ರಹಿಸಿ ಹೋರಾಟ । ವಿವಿಧ ಸಂಘಟನೆ ಬೆಂಬಲ**

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಆಗ್ರಹಿಸಿ ನಗರದ ಬಸವೇಶ್ವರ ವೃತ್ತದಲ್ಲಿ ಬಿಜೆಪಿ ಯುವ ಮೋರ್ಚಾ ನೇತೃತ್ವದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಧರಣಿ ಸತ್ಯಾಗ್ರಹ ಮುಂದುವರೆದಿದೆ.

ಬುಧವಾರ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಎಸ್.ಬಿ.ಕಂಬೋಗಿ ಮತ್ತು ಸಂಗಡಿಗರು, ಕರವೇ ತಾಲೂಕಾ ಅಧ್ಯಕ್ಷ ಬಾಳು ಮುಳಜಿ ಮತ್ತು ಸಂಗಡಿಗರು, ಮಹಿಳಾ ಮೋರ್ಚಾ ಅಧ್ಯಕ್ಷೆ ಬಸಮ್ಮ ಮರಡಿ, ಜೆಡಿ ಎಸ್ ಪಕ್ಷದ ತಾಲೂಕಾ ಅಧ್ಯಕ್ಷ ಬಿ.ಡಿ.ಪಾಟೀಲ, ಅಯೂಬ ನಾಟಿಕಾರ, ಡಾ॥ ರಮೇಶ ರಾಠೋಡ ತಮ್ಮ ಬೆಂಬಲ ಸೂಚಿಸಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಮಾಜಿ ಸಚಿವ ಮತ್ತು ಬಿಜೆಪಿ ಧುರೀಣ ಅಪ್ಪು ಪಟ್ಟಣಶೆಟ್ಟಿ ಮಾತನಾಡಿ ಇಂಡಿ ತಾಲೂಕಿನಲ್ಲಿ ಮಳೆಯ ಕೊರತೆ ಮತ್ತು ಕೃಷಿ ಪರಿಸ್ಥಿತಿಯನ್ನು ಪ್ರತ್ಯೇಕವಾಗಿ ಮರುಪರಿಶೀಲಿಸುವದು ಅಗತ್ಯವಾಗಿದೆ ಎಂದರು.

ಬಿಜೆಪಿಯ ರಾಜ್ಯ ಒ.ಬಿ ಸಿ ಮೋರ್ಚಾ ಉಪಾಧ್ಯಕ್ಷ ವಿವೇಕ ಡಬ್ಬಿ ಮಂಡಲ ಅಧ್ಯಕ್ಷ ಹಣಮಂತರಾಯಗೌಡ ಪಾಟೀಲ, ಕಾಸುಗೌಡ ಬಿರಾದಾರ, ಮಲ್ಲಿಕಾರ್ಜುನ ಕಿವಡೆ, ಶೀಲವಂತ ಉಮರಾಣಿ, ದೇವೇಂದ್ರ ಕುಂಬಾರ, ಶಂಕರಗೌಡ ಪಾಟೀಲ, ಅನೀಲ ಜಮಾದಾರ, ಅನೀಲಗೌಡ ಬಿರಾದಾರ, ಸಂತೋಷ ಪಾಟೀಲ, ರಾಮಸಿಂಗ ಕನ್ನೊಳ್ಳಿ, ಮಹೇಶ ಹೂಗಾರ, ಮಲ್ಲು ಗುಡ್ಲ, ಶಿವಯೋಗಿ ರೂಗಿಮಠ, ಪ್ರಶಾಂತ ಗವಳಿ, ಮಂಜು ದೇವರ, ಶ್ರೀಶೈಲಗೌಡ ಪಾಟೀಲ, ಮಲ್ಲು ಪಡನೂರ ಈರಣ್ಣಗೌಡ ಪಾಟೀಲ, ಗಜಾನನ ಗಿಣ್ಣಿ, ಜೆಟ್ಟು ಮರಡಿ, ಮಹೇಶ ಹೂಗಾರ ಮತ್ತಿತರಿದ್ದರು.



# ಯುಜಿಸಿ ನಿಯಮದಂತೆ ಗೌರವಧನಕ್ಕೆ ಅತಿಥಿ ಉಪನ್ಯಾಸಕರ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಥಣಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯುಜಿಸಿ ಅರ್ಹತೆ ಹೊಂದಿದ ಅತಿಥಿ ಉಪನ್ಯಾಸಕರು, ಯುಜಿಸಿ ನಿಯಮದಂತೆ ಗೌರವಧನ ನೀಡುವಂತೆ ಆಗ್ರಹಿಸಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ವಿಲಾಸ ಕಾಂಬಳೆ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ತಾವು ಕಡಿಮೆ ಗೌರವಧನದಲ್ಲಿಯೇ ಶೈಕ್ಷಣಿಕ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದೇವೆ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಯುಜಿಸಿ ಅರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿರುವುದು ಸ್ವಾಗತಾರ್ಹ ಕ್ರಮವಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಯುಜಿಸಿ ನಿಯಮಾವಳಿಗಳ ಪ್ರಕಾರ ಪ್ರತಿ ಬೋಧನಾ ಅವಧಿಗೆ ರೂ.1,500 ರಂತೆ ಮಾಸಿಕ ಗರಿಷ್ಠ ರೂ.50,000 ಗೌರವಧನ ನೀಡುವಂತೆ ಸಂಬಂಧಿಸಿದ ಇಲಾಖೆಗೆ ಸೂಚನೆಗಳಿವೆ ಆದ್ದರಿಂದ ಕರ್ನಾಟಕದಲ್ಲಿರುವ ಯುಜಿಸಿ ಅರ್ಹತೆ ಹೊಂದಿದ ಅತಿಥಿ ಉಪನ್ಯಾಸಕರಿಗೂ ಈ ನಿಯಮದನ್ವಯ ಗೌರವಧನ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ ಅಲ್ಲದೆ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಬಹುದಿನಗಳ ಬೇಡಿಕೆಯನ್ನು ಪರಿಗಣಿಸಿ ತಕ್ಷಣದಿಂದಲೇ ಯುಜಿಸಿ ನಿಯಮದಂತೆ ಗೌರವಧನ ಹೆಚ್ಚಿಸಿ ನೀಡಬೇಕು ಎಂದು ಅತಿಥಿ ಉಪನ್ಯಾಸಕರು ಮನವಿ ಮಾಡಿದರು ಒಂದು ವೇಳೆ ಈ ಬೇಡಿಕೆಯನ್ನು ಈಡೇರಿಸಲು ಸಾಧ್ಯವಾಗದಿದ್ದರೆ ಈ ಕುರಿತು ಅಧಿಕೃತ ಹಿಂಬರಹ ನೀಡುವಂತೆ ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಯುಜಿಸಿ ಅರ್ಹತೆ ಹೊಂದಿದ ಎಲ್ಲ ಅತಿಥಿ ಉಪನ್ಯಾಸಕರು ಉಪಸ್ಥಿತರಿದ್ದರು.



# ಪಿಎಸ್ಐ ತಿಪರೆಡ್ಡಿ ಗೆ ಚಕ್ರವರ್ತಿ ನ್ಯೂಸ್ ತಂಡದಿಂದ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ತಾಲೂಕಿನ ಬಸರಕೋಡ ಗ್ರಾಮದ ಆರಾಧ್ಯ ದೈವ ಪವಾಡ ಬಸವೇಶ್ವರರ ಬೆಲೆಬಾಳುವ ಬೆಳ್ಳಿ ಮೂರ್ತಿ ಕದ್ದ ಪ್ರಕರಣದಲ್ಲಿ ಕರ್ತವ್ಯ ನಿಷ್ಠೆ ಮೆರೆದ ಇಲ್ಲಿನ ಪಿಎಸ್ಐ ಸಂಜೀವ ತಿಪರೆಡ್ಡಿ ಅವರನ್ನು ಚಕ್ರವರ್ತಿ ನ್ಯೂಸ್ ತಂಡದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ನ್ಯೂಸ್ ನ ಸಂಪಾದಕ ಹಾಗೂ ನ್ಯಾಯವಾದಿ ಚೇತನ ಶಿವಶಿಂಪಿ ಮಾತನಾಡಿ, ಕಳ್ಳತನ ನಡೆದ ನಂತರ ದೂರು ದಾಖಲಿಸಿಕೊಂಡು ಸುಮ್ಮನಾಗದೆ, ಪ್ರಕರಣದ ಪ್ರತಿಯೊಂದು ಸುಳಿವನ್ನೂ ಗಂಭೀರವಾಗಿ ಪರಿಗಣಿಸಿ, ತಾಂತ್ರಿಕ ಹಾಗೂ ಇತರ ಸಾಕ್ಷ್ಯಾಧಾರಗಳನ್ನು ಆಧರಿಸಿ ತನಿಖೆ ನಡೆಸಿ ಆರೋಪಿಗಳ ಜಾಡು ಹಿಡಿಯುವಲ್ಲಿ ಪಿಎಸ್ಐ ಹಾಗೂ ಅವರ ತಂಡ ಯಶಸ್ವಿಯಾಗಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ಪೊಲೀಸ್ ಠಾಣೆಯ ಬಾಗಿಲು ತಟ್ಟುವ ಪ್ರತಿಯೊಬ್ಬ ಸಂತ್ರಸ್ತನಿಗೂ ನ್ಯಾಯ ಸಿಗಬೇಕು ಎಂಬ ಕಾಳಜಿಯಿಂದ ಪೊಲೀಸರು ಕಾರ್ಯನಿರ್ವಹಿಸಿದಾಗ ಮಾತ್ರ ಜನಸ್ನೇಹಿ ಪೊಲೀಸ್ ವ್ಯವಸ್ಥೆಯ ಆಶಯ ಸಾಕಾರಗೊಳ್ಳುತ್ತದೆ. ಅಪರಾಧಿಗಳನ್ನು ಪತ್ತೆಹಚ್ಚಿ ಕಾನೂನಿನ ಮುಂದೆ ನಿಲ್ಲಿಸುವ ಪೊಲೀಸರ ಪ್ರತಿಯೊಂದು ಯಶಸ್ಸು ಕೇವಲ ಇಲಾಖೆಯ ಸಾಧನೆಯಲ್ಲ, ಅದು ಸಮಾಜದಲ್ಲಿ ಕಾನೂನಿನ ಮೇಲಿನ ನಂಬಿಕೆಯನ್ನು ಗಟ್ಟಿಗೊಳಿಸುವ ಸಾಧನೆಯಾಗಿದೆ ಎಂದರು.

ತಪ್ಪಾದಾಗ ಪೊಲೀಸರನ್ನು ಟೀಕಿಸುವ ಸಮಾಜ, ಉತ್ತಮ ಕೆಲಸ ಮಾಡಿದಾಗ ಅದೇ ಪೊಲೀಸರ ಬೆನ್ನುತಟ್ಟಿ ಪ್ರೋತ್ಸಾಹಿಸುವ ದೊಡ್ಡತನವನ್ನೂ ತೋರಬೇಕು. ಎಷ್ಟೋ ಪ್ರಕರಣಗಳಲ್ಲಿ ಪೊಲೀಸ್ ಇಲಾಖೆಯ ಕಾರ್ಯವೈಖರಿಯನ್ನು ತೆಗಳುವುದನ್ನು ನಾವು ನೋಡಿದ್ದೇವೆ. ಆದರೆ ಕಳ್ಳತನ ಪ್ರಕರಣವನ್ನು ದಕ್ಷತೆಯಿಂದ ಭೇದಿಸಿದ ಪಿಎಸ್ಐ ಸಂಜಯ ತಿಪರೆಡ್ಡಿ ಅವರ ಕರ್ತವ್ಯನಿಷ್ಠೆಗೆ ಇಡೀ ತಾಲೂಕು ಮೆಚ್ಚುಗೆ ವ್ಯಕ್ತಪಡಿಸಿ ಗೌರವಿಸಿರುವುದು ಪೊಲೀಸ್ ಮತ್ತು ಸಾರ್ವಜನಿಕರ ನಡುವಿನ ವಿಶ್ವಾಸಕ್ಕೆ ಉತ್ತಮ ನಿದರ್ಶನವಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಸಂಜೀವ ತಿಪರೆಡ್ಡಿ ಅವರು ಮಾತನಾಡಿ ಪೊಲೀಸರು ಮತ್ತು ಸಾರ್ವಜನಿಕರ ನಡುವಿನ ವಿಶ್ವಾಸವೇ ಅಪರಾಧ ನಿಯಂತ್ರಣದ ದೊಡ್ಡ ಶಕ್ತಿ. ಸಾರ್ವಜನಿಕರು ಪೊಲೀಸರೊಂದಿಗೆ ಸಹಕರಿಸಬೇಕು. ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ತಕ್ಷಣ ಮಾಹಿತಿ ನೀಡಬೇಕು. ಜನರ ಸಹಕಾರವಿದ್ದರೆ ಇನ್ನಷ್ಟು ಪರಿಣಾಮಕಾರಿಯಾಗಿ ಅಪರಾಧಗಳನ್ನು ತಡೆಗಟ್ಟಲು ಸಾಧ್ಯ. ನನ್ನ ಜವಾಬ್ದಾರಿಗೆ ನಿಭಾಯಿಸಿದ್ದಕ್ಕೆ ತಾಲೂಕಿನ ಜನತೆ ನನ್ನನ್ನು ಗೌರವಿಸಿದ್ದಕ್ಕೆ ಸದಾ ಆಭಾರಿಯಾಗಿರುತ್ತೇನೆ ಎಂದರು.

ಈ ವೇಳೆ ಉಪಸಂಪಾದಕ ನಾಗೇಂದ್ರ ಶಿವಶಿಂಪಿ, ವರದಿಗಾರರಾದ ವಿಕ್ರಂ ಬಿರಾದಾರ, ರಫೀಕ ಬೀಳಗಿ, ವಿಜಯ ಸೋನಾರ ಇದ್ದರು.

# ಬಸವಣ್ಣನ ಜನ್ಮಸ್ಥಳ ಅಭಿವೃದ್ಧಿ ವಿಚಾರದಲ್ಲಿ ಮೀನಮೇಷ ಬೇಡ

**■ ಬ.ಕಲ್ಯಾಣ & ಕೂಡಲ ಸಂಗಮಕ್ಕೆ ನೀಡುವ ಮಹತ್ವ ಬಸವನ ಬಾಗೇವಾಡಿಗೂ ನೀಡಲಿ । ಶಾಸಕ ಶಿವಾನಂದ ಪಾಟೀಲ ಹೇಳಿಕೆ**

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಬಸವಣ್ಣನ ಜನ್ಮಸ್ಥಳವಾದ ಬಸವನ ಬಾಗೇವಾಡಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಿ ಅಭಿವೃದ್ಧಿಗೆ ಅಗತ್ಯ ಅನುದಾನ ಒದಗಿಸಬೇಕು. ಬಸವ ಕಲ್ಯಾಣ ಹಾಗೂ ಕೂಡಲ ಸಂಗಮಕ್ಕೆ ನೀಡುವ ಮಹತ್ವವನ್ನು ಬಸವನ ಬಾಗೇವಾಡಿಗೂ ನೀಡುವ ಅಗತ್ಯವಿದೆ ಎಂದು ಶಾಸಕ ಶಿವಾನಂದ ಪಾಟೀಲ ಹೇಳಿದರು.

ತಾಲೂಕಿನ ಮಸೂತಿ ಗ್ರಾಮದಲ್ಲಿ ಮಂಗಳವಾರ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ 70 ಲಕ್ಷ ಅನುದಾನದಲ್ಲಿ ಗಣಪತಿ ವೃತ್ತದಿಂದ ವೀರಭದ್ರೇಶ್ವರ ದೇವಸ್ಥಾನದವರೆಗೆ ನಿರ್ಮಿಸಲಾಗುವ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಸವಣ್ಣನ ಜನ್ಮಸ್ಥಳದ ಅಭಿವೃದ್ಧಿ ವಿಚಾರದಲ್ಲಿ ಸರ್ಕಾರ ಮೀನಮೇಷ ಎಣಿಸದೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಬೇಕು. ಮುಂದಿನ ದಿನಗಳಲ್ಲಿ ಬಸವನ ಬಾಗೇವಾಡಿಗೆ ಹೆಚ್ಚಿನ ಆದ್ಯತೆ ದೊರೆಯುವಂತೆ ಪ್ರಯತ್ನಿಸಲಾಗುವುದು ಎಂದರು.



ಮಸೂತಿ ಗ್ರಾಮವು ಶೈಕ್ಷಣಿಕ ಕ್ಷೇತ್ರದ ಹರಿಕಾರ ಬಂಥನಾಳ ಶಿವಯೋಗಿಗಳನ್ನು ನಾಡಿಗೆ ನೀಡಿದ ಹೆಗ್ಗಳಿಕೆ ಹೊಂದಿದೆ. ನೀರಾವರಿ ಹಾಗೂ ವಿದ್ಯುತ್ ಉತ್ಪಾದನೆಗಾಗಿ ಗ್ರಾಮಸ್ಥರು ತಮ್ಮ ಫಲವತ್ತಾದ ಜಮೀನುಗಳನ್ನು ತ್ಯಾಗ ಮಾಡಿದ್ದಾರೆ. ಇಂತಹ ತ್ಯಾಗಮಯ ಗ್ರಾಮಸ್ಥರ ಯಾವುದೇ ಅಭಿವೃದ್ಧಿ ಬೇಡಿಕೆಗಳಿದ್ದರೂ ಈಡೇರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಆಲಮಟ್ಟಿ ಆಣೆಕಟ್ಟು ವಿಚಾರದ ವ್ಯಾಜ್ಯ ಸುಪ್ರೀಂ ಕೋರ್ಟ್‌ನಲ್ಲಿ ಇತ್ಯರ್ಥವಾದರೆ 100 ಟಿಎಂಸಿ ನೀರಿನಲ್ಲಿ ಸುಮಾರು 80 ಟಿಎಂಸಿ ನೀರು ಜಿಲ್ಲೆಗೆ ದೊರೆಯಲಿದೆ. ಕ್ಷೇತ್ರದಲ್ಲಿ ನೀರಾವರಿ ವ್ಯಾಪ್ತಿ ಕಳೆದ ಎರಡು ದಶಕಗಳಲ್ಲಿ ಗಣನೀಯವಾಗಿ ಹೆಚ್ಚಾಗಿದೆ. ಹಿಂದೆ 9ರಿಂದ 11 ಹೆಕ್ಟೇರ್‌ನಷ್ಟಿದ್ದ ನೀರಾವರಿ ಪ್ರದೇಶ ಇದೀಗ 99 ಹೆಕ್ಟೇರ್ ಗಡಿ ತಲುಪಿದೆ ಎಂದು ತಿಳಿಸಿದರು.

ಕ್ಷೇತ್ರದ ಬಹುತೇಕ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ. ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಸಮಸ್ಯೆಯನ್ನೂ ಹಂತ ಹಂತವಾಗಿ ಬಗೆಹರಿಸಲಾಗುವುದು ಎಂದರು. ಕಾಂಗ್ರೆಸ್ ಧುರೀಣ ತಾನಾಜಿ ನಾಗರಾಳ, ವೀರೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಸಂತೋಷ ಗಣಾಚಾರಿ ಮಾತನಾಡಿದರು. ತಹಸೀಲ್ದಾರ ಸಂತೋಷ ಮ್ಯಾಗೇರಿ, ತಾಪಂ ಇಒ ಸುನಿಲ ಮದ್ದಿನ, ಪಿಎಸ್ಐ ಮಲ್ಲಿಕಾರ್ಜುನ ತಳವಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಫೀಕ ಪಕಾಲಿ, ಪ್ರಮುಖರಾದ ಬಸವರಾಜ ಸಾಲಳ್ಳಿ, ಸಿ.ಪಿ. ಪಾಟೀಲ, ಕೆ.ವಿ. ಕುಲಕರ್ಣಿ, ಬಸವರಾಜಗೌಡ ಪಾಟೀಲ, ರಾಜು ಬಿಸ್ಟಗೊಂಡ, ಡಾ.ವೈ.ಕೆ. ಹೂಗಾರ, ಶಿವನಗೌಡ ಪಾಟೀಲ, ಗುರುಶಾಂತಪ್ಪ ಸಾಲಳ್ಳಿ, ಗುರಪ್ಪ ಕಾಗಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸಂತೋಷ ಗಣಾಚಾರಿ ಸ್ವಾಗತಿಸಿದರು. ನವೀನ ಸಾಲಳ್ಳಿ ನಿರೂಪಿಸಿದರು. ಎಸ್.ಎಸ್. ಗರಸಂಗಿ ವಂದಿಸಿದರು.

# ಗುಟ್ಕಾ ಸೇವನೆ ಚಟ ಹತ್ತಿಸುವುದು ಚಟ್ಟ!



■ ಉದಯರಶ್ಮಿ ದಿನಪತ್ರಿಕೆ

## ಆರೋಗ್ಯ ಅಂಗಳ

ಪಾಶ್ಚಿಮಾತ್ಯದ ಮೋಹಪರವಶದಲ್ಲಿ ಸಿಲುಕಿರುವ ನಾವುಗಳು, ಅವರನ್ನೇ ಮೀರಿಸುವ ಬರದಲ್ಲಿ (ಡ್ರಗ್ಸ್,ಗಾಂಜಾ, ಅಫೀಮು, ಹೆರಾಯಿನ್, ಕೊಕೇನ್, ಮದ್ಯಪಾನ, ತಂಬಾಕು ಮತ್ತು ಧೂಮಪಾನ, ಬ್ರೌನ್ ಶುಗರ್ )ಮಾದಕವೆಂಬ ವಿಷ ವರ್ತುಲದಲ್ಲಿ ಬಂದಿಯಾಗಿ, ಹಣ– ಗುಣದ ಜೊತೆಗೆ ಆರೋಗ್ಯವನ್ನು ಕಳೆದುಕೊಂಡು ಹೆಣವಾಗುತ್ತಿದ್ದೇವೆ, ಮೇಲಿನವು ದುಬಾರಿ ರಕ್ಕಸರಾದರೆ, ಸದುವಿನಯದಿ ಕೊಲ್ಲುವ ಭಯಂಕರ (10– 20 ರೂಪಾಯಿ ದೊರಕುವ )ಚಿಲ್ಲರೆ ಅಸುರ, ಗುಟ್ಕಾ..

"Chewing Tobacco" (ಅಗಿಯುವ ತಂಬಾಕು) ಅಥ–ವಾ "Smokeless Tobacco" (ಹೊಗೆರಹಿತ ತಂಬಾಕು) ಎಂದು ಕರೆಯುವ ಇದು ಸದ್ದಿಲ್ಲದೆ ಮನುಜನ ಕತೆ ಮುಗಿಸಿಬಿಡುತ್ತದೆ.

ಗುಟ್ಕಾ ಸೇವನೆಯು ಕೇವಲ ಬಾಯಿಗೆ ಮಾತ್ರವಲ್ಲದೆ ಇಡೀ ದೇಹದ ಆಂತರಿಕ ಅಂಗಾಂಗಗಳಿಗೆ ಹರಡುವ ಹತ್ತಾರು ಮಾರಕ ಕಾಯಿಲೆಗಳಿಗೆ ನೇರ ಕಾರಣವಾಗುತ್ತದೆ. ಇದರಲ್ಲಿರುವ 28 ಕ್ಕೂ ಹೆಚ್ಚು ಕ್ಯಾನ್ಸರ್ ಕಾರಕ ಕೆಮಿಕಲ್‌ಗಳು ದೇಹವನ್ನು ನಿಧಾನವಾಗಿ ಕೊಲ್ಲುತ್ತವೆ.

ಮಹಾಮಾರಿ ಗುಟ್ಕಾ ಸೇವನೆಯಿಂದ ಬರುವ ರೋಗಗಳು



ಬಾಯಿಯ ಮತ್ತು ಗಂಟಲಿನ ಕ್ಯಾನ್ಸರ್ (Oral & Throat Cancer)

ಗುಟ್ಕಾ ತಿನ್ನುವುದರಿಂದ ಬರುವ ಅತ್ಯಂತ ಸಾಮಾನ್ಯ ಮತ್ತು ಪ್ರಾಣಾಪಾಯ ತರುವ ರೋಗವಿದು. ಕೆನ್ನೆ, ನಾಲಿಗೆ, ದವಡೆ, ಮತ್ತು ಗಂಟಲಿನಲ್ಲಿ ಗಡ್ಡೆಗಳು ಅಥವಾ ಎಂದಿಗೂ ವಾಸಿಯಾಗದ ಹುಣ್ಣುಗಳು (Ulcers) ಸೃಷ್ಟಿಯಾಗಿ ಇಡೀ ಮುಖದ ಭಾಗವನ್ನೇ ಕರಗಿಸಿಬಿಡುತ್ತದೆ.

ಓರಲ್ ಸಬ್‌ಮ್ಯೂಕಸ್ ಫೈಬ್ರೋಸಿಸ್ (OSF – ಬಾಯಿ ಗಟ್ಟಿಯಾಗುವುದು) ಈ ಕಾಯಿಲೆ ಬಂದಾಗ ಬಾಯಿಯ ಒಳಗಿನ ಮೃದುವಾದ ಚರ್ಮವು ಸಂಪೂರ್ಣವಾಗಿ ಗಟ್ಟಿಯಾಗುತ್ತದೆ. ರೋಗಿಗೆ ಬಾಯಿಯನ್ನು ಸಹ ಪೂರ್ತಿಯಾಗಿ ತೆರೆಯಲು ಸಾಧ್ಯವಾಗುವುದಿಲ್ಲ. ಕೊನೆಗೆ ಕೇವಲ ಒಂದು ಸ್ಟ್ರಾ (Straw) ಹೋಗುವಷ್ಟು ಮಾತ್ರ ಬಾಯಿ ತೆರೆಯುತ್ತದೆ, ಇದರಿಂದ ಆಹಾರ ಅಗಿಯುವುದು ಅಸಾಧ್ಯವಾಗುತ್ತದೆ. ಇದು ಮುಂದೆ 100% ಕ್ಯಾನ್ಸರ್ ಆಗಿ ಬದಲಾಗುತ್ತದೆ.

ಹೃದಯಾಘಾತ ಮತ್ತು ಪಾರ್ಶ್ವವಾಯು (Heart Attack & Stroke)

ಗುಟ್ಕಾದಲ್ಲಿರುವ ನಿಕೋಟಿನ್ ಅಂಶವು ಹೃದಯದ ಬಡಿತ ಮತ್ತು ರಕ್ತದೊತ್ತಡವನ್ನು (BP) ತಕ್ಷಣವೇ ಹೆಚ್ಚಿಸುತ್ತದೆ. ಇದು ರಕ್ತನಾಳಗಳನ್ನು ಕಿರಿದಾಗಿಸಿ, ಹೃದಯಕ್ಕೆ ರಕ್ತದ ಹರಿವನ್ನು ನಿಲ್ಲಿಸುತ್ತದೆ.



ಇದರಿಂದ ಹೃದಯಾಘಾತ (Heart Attack) ಅಥವಾ ಮೆದುಳಿನ ಪಾರ್ಶ್ವವಾಯು (Stroke) ಸಂಭವಿಸುವ ಅಪಾಯ ತುಂಬಾ ಹೆಚ್ಚಿರುತ್ತದೆ

ಅನ್ನನಾಳ ಮತ್ತು ಜಠರದ ಕ್ಯಾನ್ಸರ್ (Esophagus & Stomach Cancer)

ಗುಟ್ಕಾ ಜಗಿಯುವಾಗ ಅದರ ರಸವನ್ನು ಹೊಟ್ಟೆಗೆ ನುಂಗುವುದರಿಂದ, ಆ ಕೆಮಿಕಲ್‌ಗಳು ಅನ್ನನಾಳ ಮತ್ತು ಜಠರದ ಒಳಗಿನ ಪದರಗಳನ್ನು ಸುಟ್ಟು ಹಾಕುತ್ತವೆ. ಇದು ಜಠರದಲ್ಲಿ ತೀವ್ರವಾದ ಅಲ್ಸರ್ (ಹೊಟ್ಟೆಯ ಹುಣ್ಣು) ಮತ್ತು ಮುಂದೆ ಅನ್ನನಾಳದ ಕ್ಯಾನ್ಸರ್‌ಗೆ ಕಾರಣವಾಗುತ್ತದೆ.

ಲಿವರ್ ಮತ್ತು ಕಿಡ್ನಿ ವೈಫಲ್ಯ (Liver & Kidney Damage)

ಗುಟ್ಕಾದಲ್ಲಿ ಸೀಸ (Lead), ಆರ್ಸೆನಿಕ್ ಮತ್ತು ಕ್ರಿಮಿನಾಶಕಗಳಂತಹ ಭಾರ ಲೋಹಗಳ (Heavy metal) ಅಂಶಗಳಿರುತ್ತವೆ. ಇವುಗಳನ್ನು ದೇಹದಿಂದ ಹೊರಹಾಕಲು ಕೆಲಸ ಮಾಡುವ ಲಿವರ್ ಮತ್ತು ಕಿಡ್ನಿಗಳು ದೀರ್ಘಕಾಲದ ಬಳಕೆಯಿಂದ ಸಂಪೂರ್ಣವಾಗಿ ಕೆಟ್ಟುಹೋಗುತ್ತವೆ.

ಪುರುಷತ್ವ ದೌರ್ಬಲ್ಯ ಮತ್ತು ಗರ್ಭಪಾತ (Infertility & Pregnancy Risks) ಪುರುಷರಲ್ಲಿ ತಂಬಾಕು ಸೇವನೆಯು ವೀರ್ಯಾಣುಗಳ ಸಂಖ್ಯೆ ಮತ್ತು ಗುಣಮಟ್ಟವನ್ನು ತೀವ್ರವಾಗಿ ಕುಂಠಿತಗೊಳಿಸಿ ನಪುಂಸಕತ್ವಕ್ಕೆ ದಾರಿ ಮಾಡಿಕೊಡುತ್ತದೆ.

ಇನ್ನು ಮಹಿಳೆಯರಲ್ಲಿ ಗರ್ಭಿಣಿಯರು ಗುಟ್ಕಾ ಬಳಸಿದರೆ ಹುಟ್ಟುವ ಮಗು ಕಡಿಮೆ ತೂಕ ಹೊಂದಿ ಹೊಟ್ಟೆಯಲ್ಲೇ ಮಗು ಸಾಯುವ (Stillbirth) ಅಪಾಯವಿರುತ್ತದೆ. ಇಷ್ಟೆಲ್ಲ ಅಪಾಯಗಳ ಆಗರವಾಗಿರುವ ಗುಟ್ಕಾ ಸೇವಿಸುವ ಅಗತ್ಯವಿದೆಯೇ..? ಉತ್ಪನ್ನ ಮತ್ತು ಮಾರಾಟದ ಅವಶ್ಯವಿದೆಯೇ..? ಇದನೆಲ್ಲ ಮನಗಂಡಂತೆ ಕಂಡ ಸರ್ಕಾರವು ಕರುನಾಡನ್ನು ಪಾನ ಮುಕ್ತ ಕರ್ನಾಟಕವನ್ನಾಗಿ ಮಾಡಲು ಗುಟ್ಕಾ ನಿಷೇಧಿಸಿ 10/8/2026ರಂದು ಆದೇಶ ಹೊರಡಿಸಿತು, ಆದ್ರೆ ಆದೇಶಕ್ಕೆ ಸ್ವಪಕ್ಷೀಯ ಶಾಸಕ – ಸಚಿವರು, ಮತ್ತು ವಿರೋಧ ಪಕ್ಷದ ಶಾಸಕರು ( ಬಹುಶಃ ಇವರು ಗುಟ್ಕಾ ಕಂಪನಿಗಳ ಆಮಿಷಕ್ಕೆ ಒಳಗಾಗಿರಬಹುದು ) ಅಡಕೆ ಬೆಳೆಗಾರರ ಹಿತದೃಷ್ಟಿಯ ನೆಪವೊಡ್ಡಿ ತೀವ್ರ ವಿರೋಧ ವ್ಯಕ್ತಪಡಿಸಿದ ಪರಿಣಾಮ, ಆದೇಶ ಹೊರಡಿಸಿದ ಕೇವಲ ಎರಡೇ ದಿನದಲ್ಲಿ 14–8–26ರಂದು ರದ್ದು ಪಡಿಸಿ ಮತ್ತೆ ಜನತೆಯನ್ನು ಮಹಾಮಾರಿಗೆ ಬಲಿಯಾಗಲು ತಳ್ಳಿತು. ಇದು ಸರಿಯಾದ ಕ್ರಮವಲ್ಲ, ಸರ್ಕಾರವು ಈ ಕೆಲ ಬಿಟ್ಟಿ ಭಾಗ್ಯಗಳ ಬದಲು, ಗುಟ್ಕಾ ಜೊತೆಗೆ ಮದ್ಯಪಾನ, ಬೀಡಿ – ಸಿಗರೇಟ್ ಸಮೇತ ಎಲ್ಲಾ ಮಾದಕವಸ್ತುಗಳನ್ನು ಸಂಪೂರ್ಣ ನಿಷೇದ ಮಾಡಿದರೆ, ಜನತೆಗೆ ಅಪಾರ ಪ್ರಮಾಣದ ದುಡ್ಡು ಉಳಿಯುವದರ ಜೊತೆಗೆ ಪ್ರತಿ ಮನೆ–ಮನಗಳಲ್ಲಿ ಶಾಂತಿ ನೆಮ್ಮದಿ ಲಭಿಸಿ ಸರ್ಕಾರಕ್ಕೆ ಒಳ್ಳೇ ಹೆಸರು ಬರುತ್ತೆ. ಭಾಗ್ಯಳ ಬೆನ್ನು ಹತ್ತಿ, 6 ಲಕ್ಷಕೋಟಿ ಸಾಲ ಮಾಡಿ ನಾಡಿನ ಮರ್ಯಾದೆ ಕಳೆಯೋದು ತಪ್ಪುತ್ತೆ ಅಲ್ವಾ?

### ಒಂದು ಅಂದಾಜಿನ ಪ್ರಕಾರ

ಭಾರತ ದೇಶದ ಒಟ್ಟಾರೆ ಅಂಕಿ–ಅಂಶಗಳು (National Level) ಒಟ್ಟು ಕ್ಯಾನ್ಸರ್‌ನಲ್ಲಿ ಪಾಲು

ಇಡೀ ದೇಶದಲ್ಲಿ ವರದಿಯಾಗುವ ಒಟ್ಟು ಕ್ಯಾನ್ಸರ್ ಪ್ರಕರಣಗಳಲ್ಲಿ ಶೇಕಡಾ 47.6 ರಷ್ಟು ಪ್ರಕರಣಗಳು ತಂಬಾಕು ಮತ್ತು ಗುಟ್ಕಾ ಬಳಕೆಯಿಂದಲೇ ಆಗುತ್ತಿವೆ.

ಬಾಯಿಯ ಕ್ಯಾನ್ಸರ್ (Oral Cancer)

ಭಾರತದಲ್ಲಿ ಬಾಯಿಯ ಕ್ಯಾನ್ಸರ್ ಪೀಡಿತರಾಗಿರುವವರಲ್ಲಿ ಶೇಕಡಾ 90 ಕ್ಕಿಂತ ಹೆಚ್ಚು (90%+) ಜನ ಗುಟ್ಕಾ, ಖೈನಿ, ಪಾನ್ ಮಸಾಲಾ ಅಥವಾ ಅಡಿಕೆ–ಸುಣ್ಣದ ಮಿಶ್ರಣವನ್ನು ಅಗಿಯುವ ಹವ್ಯಾಸ ಹೊಂದಿದ್ದವರಾಗಿದ್ದಾರೆ.

### ಜಾಗತಿಕ ಮಟ್ಟದಲ್ಲಿ ಅಗ್ರಸ್ಥಾನ

ಇತ್ತೀಚಿನ ಪ್ರತಿಷ್ಠಿತ ದಿ ಲ್ಯಾನ್ಸೆಟ್ (The Lancet) ಅಧ್ಯಯನದ ಪ್ರಕಾರ, ಪ್ರಪಂಚದಲ್ಲೇ ಹೊಗೆರಹಿತ ತಂಬಾಕು (ಗುಟ್ಕಾ) ಸೇವನೆಯಿಂದ ಬರುವ ಬಾಯಿ ಕ್ಯಾನ್ಸರ್ ಪ್ರಕರಣಗಳಲ್ಲಿ ಭಾರತವೇ ಮೊದಲ ಸ್ಥಾನದಲ್ಲಿದೆ.

ಇನ್ನು ಕರ್ನಾಟಕದ ಪರಿಸ್ಥಿತಿ (Kidwai Oncology Report) ಕರ್ನಾಟಕದ ಪ್ರಮುಖ ಕ್ಯಾನ್ಸರ್ ಸಂಸ್ಥೆಯಾದ ಕಿದ್ವಾಯಿ (KMIO) ವರದಿಯ ಪ್ರಕಾರ, ರಾಜ್ಯದಲ್ಲಿ ದಾಖಲಾಗುವ ಒಟ್ಟು ಕ್ಯಾನ್ಸರ್ ಪ್ರಕರಣಗಳಲ್ಲಿ ಶೇಕಡಾ 40 ಕ್ಕಿಂತ ಹೆಚ್ಚು (40.4%) ಪ್ರಕರಣಗಳು ಗುಟ್ಕಾ, ತಂಬಾಕು ಮತ್ತು ಸಿಗರೇಟ್ ಸೇವನೆಯಿಂದಲೇ ಉಂಟಾಗುತ್ತಿವೆ.

### ಪುರುಷರಲ್ಲಿ ಹೆಚ್ಚು

ರಾಜ್ಯದಲ್ಲಿ ಕ್ಯಾನ್ಸರ್ ಪೀಡಿತರಾಗುವ ಪುರುಷರಲ್ಲಿ ಶೇಕಡಾ 52.5 ರಷ್ಟು ಮಂದಿ ತಂಬಾಕು ಮತ್ತು ಗುಟ್ಕಾ ವ್ಯಸನದಿಂದಾಗಿ ರೋಗಕ್ಕೆ



ತುತ್ತಾಗುತ್ತಿದ್ದಾರೆ. ಮಹಿಳೆಯರಲ್ಲಿ ಈ ಪ್ರಮಾಣ ಶೇಕಡಾ 30.7 ರಷ್ಟು ಇದೆ.ಇಷ್ಟೆಲ್ಲಾ ಭಯಂಕರ ಅಪಾಯವಿರುವ ಗುಟ್ಕಾ, ತಂಬಾಕು ಸೇವನೆ ಅಗತ್ಯವೆ ತಾವೇ ಒಮ್ಮೆ ಯೋಚಿಸಿರಿ.

ಒಂದು ವೇಳೆ ತಾವು ಬಿಡಲಾಗದಷ್ಟು ಅಂಟಿಕೊಂಡು ಬಿಟ್ಟಿದ್ದರೆ ಅದಕೊಂದು ಸರಳ ಪರ್ಯಾಯ ಮಾರ್ಗವಿದೆ.

### ಅಡಿಕೆ ಮತ್ತು ಸುಣ್ಣ, ವೀಳ್ಯದೆಲೆ ಮಿಶ್ರಣ ಸೇವನೆ

ಅಡಿಕೆ ಮತ್ತು ಸುಣ್ಣದ ಸಂಯೋಜನೆಯನ್ನು ಭಾರತೀಯ ಸಂಸ್ಕೃತಿಯಲ್ಲಿ ಸಾಂಪ್ರದಾಯಿಕವಾಗಿ ತಾಂಬೂಲ (ವೀಳ್ಯದೆಲೆ) ಅಥವಾ ಪಾನ್ ಜೊತೆಗೆ ಸೇರಿಸಿ ಮಿತ ಪ್ರಮಾಣದಲ್ಲಿ ಇವುಗಳನ್ನು ಅಗಿಯುವುದರಿಂದ ದೇಹಕ್ಕೆ ಕೆಲವು ಆರೋಗ್ಯಕರ ಪ್ರಯೋಜನಗಳು ಸಿಗುತ್ತವೆ.

ಅಡಿಕೆ ಮತ್ತು ಸುಣ್ಣವನ್ನು ಒಟ್ಟಿಗೆ ಅಗಿಯುವುದರಿಂದ ಜೀರ್ಣಕ್ರಿಯೆ ಸುಧಾರಿಸುತ್ತದೆ ಅಡಿಕೆ ಮತ್ತು ಸುಣ್ಣದ ಮಿಶ್ರಣವು ಬಾಯಿಯಲ್ಲಿ ಹೆಚ್ಚು ಲಾಲಾರಸ (Saliva) ಉತ್ಪತ್ತಿಯಾಗಲು ಸಹಾಯ ಮಾಡುತ್ತದೆ.

### ಆಹಾರದ ಜೀರ್ಣ

ಈ ಲಾಲಾರಸವು ಹೊಟ್ಟೆಯಲ್ಲಿನ ಆಹಾರವನ್ನು ಸುಲಭವಾಗಿ ಜೀರ್ಣ ಮಾಡಲು ಮತ್ತು ಗ್ಯಾಸ್ಟ್ರಿಕ್ ಸಮಸ್ಯೆಯನ್ನು ಕಡಿಮೆ ಮಾಡಲು ನೆರವಾಗುತ್ತದೆ. ಎರಡನೆಯದು ದೇಹಕ್ಕೆ ಕ್ಯಾಲ್ಸಿಯಂ ಲಭ್ಯತೆ, ಸುಣ್ಣವು (Slaked lime) ನೈಸರ್ಗಿಕವಾಗಿ ಕ್ಯಾಲ್ಸಿಯಂ ಕಾರ್ಬೋನೇಟ್ ಆಗಿದೆ. ಅತ್ಯಂತ ಕಡಿಮೆ ಪ್ರಮಾಣದಲ್ಲಿ ಸುಣ್ಣವನ್ನು ಸೇವಿಸುವುದರಿಂದ ದೇಹಕ್ಕೆ ಅಗತ್ಯವಿರುವ ಕ್ಯಾಲ್ಸಿಯಂ ದೊರೆತು, ಮೂಳೆ ಮತ್ತು ಹಲ್ಲುಗಳ ಆರೋಗ್ಯಕ್ಕೆ ಪೂರಕವಾಗುತ್ತದೆ. ಜೊತೆಗೆ ಬಾಯಿಯ ದುರ್ವಾಸನೆ ತಡೆಗಟ್ಟುತ್ತದೆ ಅಡಿಕೆಯಲ್ಲಿರುವ ಸಂಕೋಚಕ ಗುಣ (Astringent property) ಮತ್ತು ಸುಣ್ಣದ ಮಿಶ್ರಣವು ಬಾಯಿಯಲ್ಲಿರುವ ಬ್ಯಾಕ್ಟೀ–ರಿಯಾಗಳನ್ನು ನಿಯಂತ್ರಿಸಿ, ದುರ್ವಾಸನೆಯನ್ನು ಹೋಗಲಾಡಿಸುತ್ತದೆ. ಅಡಿಕೆಯಲ್ಲಿರುವ ನೈಸರ್ಗಿಕ ಅಂಶಗಳು ನರಮಂಡಲವನ್ನು ಸ್ವಲ್ಪ ಮಟ್ಟಿಗೆ ಉತ್ತೇಜಿಸುತ್ತವೆ. ಇದು ಆಲಸ್ಯವನ್ನು ದೂರ ಮಾಡಿ, ತಕ್ಷಣದ ಶಕ್ತಿ ಅಥವಾ ಚುರುಕುತನ ನೀಡುತ್ತದೆ.

ಆಯುರ್ವೇದದ ಪ್ರಕಾರ, ಅಡಿಕೆಯಲ್ಲಿರುವ ಕಹಿ ಮತ್ತು ಒಗರು ಗುಣಗಳು ಹೊಟ್ಟೆಯಲ್ಲಿರುವ ಜಂತುಹುಳುಗಳನ್ನು (Intestinal worms)ನಾಶಪಡಿಸಲು ಸಹಾಯ ಮಾಡುತ್ತವೆ.

### ಎಚ್ಚರಿಕೆ: ಮಿತ ಬಳಕೆ ಅತ್ಯಗತ್ಯ

ಇವುಗಳನ್ನು ಅತ್ಯಂತ ಕಡಿಮೆ ಪ್ರಮಾಣದಲ್ಲಿ ಮಾತ್ರ ಬಳಸಬೇಕು. ಅತಿಯಾಗಿ ಬಳಸಿದರೆ ಸುಣ್ಣವು ಬಾಯಿ ಮತ್ತು ಜಠರದ ತೇವಾಂಶವನ್ನು ಹೀರಿ ಹುಣ್ಣುಗಳನ್ನು (Ulcer) ಉಂಟುಮಾಡಬಹುದು. ತಂಬಾಕು ಮುಕ್ತವಾಗಿರಲಿ

ಅಡಿಕೆ–ಸುಣ್ಣದ ಜೊತೆಗೆ ತಂಬಾಕು (Tobacco) ಅಥವಾ ಗುಟ್ಕಾ ಮಿಶ್ರಣ ಮಾಡಿದರೆ ಅದು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ ಕೇವಲ ಸಾಂಪ್ರದಾಯಿಕ ತಾಂಬೂಲದ ರೂಪದಲ್ಲಿ ಮಾತ್ರ ಬಳಸಿದರೆ ಅಡಿಕೆ ಬೆಳೆಗಾರರ ಸಮಸ್ಯೆಯು ಪರಿಹಾರವಾಗುತ್ತೆ, ಆರೋಗ್ಯಕರವಾದ ಬದುಕು ಲಭಿಸುತ್ತೆ ಏನಂತೀರಾ..?

ಲೇಖನ
– ಡಾ.ಮಲ್ಲಿಕಾರ್ಜುನ.ಎಸ್.ಆಲಮೇಲ.
ಯಡ್ರಾಮಿ
ಜೇವರ್ಗಿ ತಾಲೂಕು
ಕಲಬುರ್ಗಿ ಜಿಲ್ಲೆ



# ಉತ್ತಮ ಸೇವೆಗೆ ಸಿದ್ರಾಮ ಇಟ್ಟಿಗೆ ಐಪಿಪಿಬಿ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ, (ಜಮಖಂಡಿ): ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ (IPPB) 9ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ, ಏಪ್ರಿಲ್ 2026ರಿಂದ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿ ಬ್ಯಾಂಕಿಂಗ್ ಸೇವೆಗಳನ್ನು ಜನಸಾಮಾನ್ಯ–ರಿಗೆ ತಲುಪಿಸುವಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಬಾಗಲಕೋಟೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಿಕ್ಕಪಡಸಲಗಿ ಐಬಿಸಿ (IBC) ಸಿದ್ರಾಮ್ ಇಟ್ಟಿ ಅವರನ್ನು ಸನ್ಮಾನಿಸಿ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಕಾರ್ಯಕ್ರ ಮದಲ್ಲಿ ಐಪಿಪಿಬಿ ಬ್ಯಾಂಕಿಂಗ್ ಸೇವೆಗಳ ಮೂಲಕ ಗ್ರಾಮೀಣ ಹಾಗೂ ನಗರ ಪ್ರದೇಶದ ಜನ–ರಿಗೆ ಅನುಕೂಲವಾಗುತ್ತಿರುವ ಕುರಿತು ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು. "ಜನರ ವಿಶ್ವಾಸವೇ ನಮ್ಮ ಶಕ್ತಿ. ಅವರ ಸೇವೆ ಮಾಡುವುದೇ ನಮ್ಮ ಮುಖ್ಯ ಉದ್ದೇಶ" ಎಂದು ಸಿದ್ರಾಮ್ ಇಟ್ಟಿ ಪತ್ರಿಕೆಗೆ ಪ್ರತಿಕ್ರಿಯಿಸಿದರು.

# ಗಣೇಶ ಮೂರ್ತಿ ವಿಸರ್ಜನೆಗೆ ಪರ್ಯಾಯ ಹೊಂಡಗಳ ವ್ಯವಸ್ಥೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಐತಿಹಾಸಿಕ ತಾಜಬಾವಡಿ ಆವರಣದಲ್ಲಿ ಜೀರ್ಣೋದ್ಧಾರ ಕಾಮಗಾರಿ ನಡೆಯುತ್ತಿರುವುದರಿಂದ ಹಾಗೂ ಅದನ್ನು ರಾಜ್ಯ ಸಂರಕ್ಷಿತ ಪಾರಂಪರಿಕ ಸ್ಮಾರಕ ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ, ಈ ಬಾರಿ ಸಾರ್ವಜನಿಕ ಗಣೇಶ ಮೂರ್ತಿಗಳ ವಿಸರ್ಜನೆಗೆ ಮಹಾನಗರ ಪಾಲಿಕೆ ಪರ್ಯಾಯ ಸ್ಥಳಗಳನ್ನು ಗುರುತಿಸಿದೆ.

ತಾಜಬಾವಡಿಯಲ್ಲಿ ಟಾಟಾ ಕನ್ಸಲ್ಟೆನ್ಸಿ ಸರ್ವಿಸ್ ಅವರ ಸಿಎಸ್ಆರ್ ಅನುದಾನದಡಿ ವರ್ಲ್ಡ್ ಮಾನ್ಯುಮೆಂಟ್ ಫಂಡ್ ಫೌಂಡೇಶನ್ ಇಂಡಿಂ–ಯಾ ಸಂಸ್ಥೆಯು ವಕ್ಫ್ ಮತ್ತು ಪುರಾತತ್ವ ಇಲಾಖೆಯ ಅನುಮತಿಯೊಂದಿಗೆ ಜೀರ್ಣೋದ್ಧಾರ ಕೈಗೊಂಡಿದೆ. ಇಲ್ಲಿ ನಿರ್ಮಿಸಲಾಗುತ್ತಿರುವ ಪುಷ್ಕರಣಿಯಲ್ಲಿ ದೊಡ್ಡ ಗಾತ್ರದ ಗಣಪತಿ ಮೂರ್ತಿಗಳನ್ನು ವಿಸರ್ಜಿಸಲು ಅವಕಾಶವಿರುವುದಿಲ್ಲ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ತಾಜಬಾವಡಿ ಕಾಯಂ ಪುಷ್ಕರಣಿ: ಮನೆಗಳಲ್ಲಿ ಪ್ರತಿಷ್ಠಾಪಿಸುವ ಸಣ್ಣ ಗಾತ್ರದ (ಸುಮಾರು 2 ಅಡಿಗಳವರೆಗೆ) ಗಣೇಶ ಮೂರ್ತಿಗಳ ವಿಸರ್ಜನೆಗೆ ಮಾತ್ರ ಇಲ್ಲಿ ಅವಕಾಶವಿದೆ.

ಸ್ಯಾಟ್‌ಲೈಟ್ ಬಸ್ ಸ್ಟ್ಯಾಂಡ್: ಸಾರ್ವಜನಿಕ ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಕೃತಕ ಹೊಂಡದ ವ್ಯವಸ್ಥೆ ಮಾಡಲಾಗುವುದು.

ಜೈಲ್ ದರ್ಗಾ ಹತ್ತಿರ: ಸಾರ್ವಜನಿಕ ಮಂಡಳಿಗಳು ಪ್ರತಿಷ್ಠಾಪಿಸಿದ ದೊಡ್ಡ ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಕೃತಕ ಹೊಂಡದ ವ್ಯವಸ್ಥೆ ಮಾಡಲಾಗುವುದು. ಐತಿಹಾಸಿಕ ಸ್ಮಾರಕದ ಸಂರಕ್ಷಣೆ ಮತ್ತು ಪಾರಂಪರಿಕ ನಿಯಮಗಳನ್ನು ಗಮನದಲ್ಲಿಟ್ಟುಕೊಂಡು ಪಾಲಿಕೆಯು ಈ ಕ್ರಮ ಕೈಗೊಂಡಿದ್ದು, ನಗರದ ಎಲ್ಲಾ ಗಣೇಶ ಮಂಡಳಿಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಮಹಾನಗರ ಪಾಲಿಕೆಯೊಂದಿಗೆ ಸಹಕರಿಸಬೇಕು ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ



# ಕ್ರೀಡಾಕೂಟ: ಗೆಲುವುಸೋಲಿಗಿಂತ ಕ್ರೀಡಾಸ್ಫೂರ್ತಿಗೆ ಆದ್ಯತೆ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಕ್ರೀಡಾಕೂಟವು ಗೆಲುವು ಸೋಲಿನಾಚೆಗೆ ವಿದ್ಯಾರ್ಥಿಗಳಲ್ಲಿ ಶಿಸ್ತು, ತಾಳ್ಮೆ, ನಾಯಕತ್ವ ಹಾಗೂ ಸವಾಲುಗಳನ್ನು ಎದುರಿಸುವ ಮನೋಭಾವ ಬೆಳೆಸುವ ವೇದಿಕೆಯಾಗಿದೆ. ಸಮಗ್ರ ಶಿಕ್ಷಣದಲ್ಲಿ ಕ್ರೀಡೆಗೆ ಅವಿಭಾಜ್ಯ ಸ್ಥಾನವಿದೆ ಎಂದು ಬಸವನಬಾಗೇವಾಡಿ ತಾಲ್ಲೂಕಿನ ನೂತನ ದೈಹಿಕ ಶಿಕ್ಷಣ ಪರಿವೀಕ್ಷಕ ರುದ್ರಪ್ಪ ನರೇಗಲ್ಲ ಹೇಳಿದರು. ಮಂಗಳವಾರ ಆಲಮಟ್ಟಿಯ ಶಾಲಾ ಮೈದಾನದಲ್ಲಿ ಚಿಮ್ಮಲಗಿ ಭಾಗ1ಎ ಸರ್ಕಾರಿ ಪ್ರಾಥ–ಮಿಕ ಶಾಲೆಯ ಆಶ್ರಯದಲ್ಲಿ ಆಯೋಜಿಸಿದ್ದ ಆಲಮಟ್ಟಿ ವಲಯ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು. ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಸಂಗಮೇಶ ಬಿರಾದಾರ ಕ್ರೀಡಾಜ್ಯೋತಿ ಸ್ವೀಕರಿಸಿದರು. ಚಿಮ್ಮಲಗಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ದೇವೇಂದ್ರಪ್ಪ ಕಾರಬಾರಿ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಸಂಯೋಜಕ ಯು.ವೈ. ಬಶೆಟ್ಟಿ, ಎಂ.ವಿ. ಗಬ್ಬೂರ, ಸುರೇಶ ಹುರಕಡ್ಲಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಸಲೀಂ ದಡೇದ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎಂ.ಎಂ. ಮುಲ್ಲಾ, ಬಿ.ಎಸ್. ಯರವಿನತೆಲಿಮಠ, ಬಿ.ಡಿ. ಚಲವಾದಿ, ಸಿ.ಎಸ್. ಚಿಮ್ಮಲಗಿ, ರವಿಶಂಕರ ಕೋತಿನ, ಎಚ್.ಎಫ್. ಕಟ್ಟಿಮನಿ, ರಾಘವೇಂದ್ರ ಕುಲಕರ್ಣಿ, ಶಿವಾಜಿ ಕಟ್ಟಿಮನಿ, ತುಕಾರಾಂ ಕಟ್ಟಿಮನಿ, ನಾಗೇಶ ಮಹೇಂದ್ರಕರ, ಕೆ.ಎಸ್. ಮಾಳಗೊಂಡ, ಎಲ್.ಸಿ. ಚಲವಾದಿ, ಎನ್.ಬಿ. ದಾಸರ, ಪ್ರಕಾಶ ಇಜೇರಿ, ದೇವು ವಾಲಿಕಾರ ಉಪಸ್ಥಿತರಿದ್ದರು. ಆಲಮಟ್ಟಿಯಲ್ಲಿ ಚಿಮ್ಮಲಗಿ ಭಾಗ 1 ಎ ಶಾಲೆಯ ಆಶ್ರಯದಲ್ಲಿ ಜರುಗಿದ ಆಲಮಟ್ಟಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಕ್ರೀಡಾಪಟುಗಳು ತಂದ ಕ್ರೀಡಾ ಜ್ಯೋತಿಯನ್ನು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಂಗಮೇಶ ಬಿರಾದಾರ, ಯು. ವೈ. ಬಶೆಟ್ಟಿ, ದೇವೇಂದ್ರಪ್ಪ ಕಾರಬಾರಿ ಸ್ವೀಕರಿಸಿದರು

# ಹೊಯ್ಸಳ, ಕೆಳದಿ ಚೆನ್ನಮ್ಮ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿನಲ್ಲಿ ಬಾಲಕರಿಗಾಗಿ ಹೊಯ್ಸಳ, ಬಾಲಕಿಯರಿಗಾಗಿ ಕೆಳದಿ ಚೆನ್ನಮ್ಮ ಜಿಲ್ಲಾ ಮಟ್ಟದ ಪ್ರಶಸ್ತಿಗಾಗಿ ಅರ್ಹ ಮಕ್ಕಳಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅರ್ಜಿ ಆಹ್ವಾನಿಸಿದೆ. ಅಸಾಧಾರಣ ಸಾಧನೆಗೈದ 5 ರಿಂದ 18 ವರ್ಷದೊಳಗಿನ ಜಿಲ್ಲೆಯ ಮಕ್ಕಳಿಗೆ ಈ ಪ್ರಶಸ್ತಿ ನೀಡಲಾಗುವುದು. ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ ಹಾಗೂ ಕಲೆ, ಸಾಂಸ್ಕೃತಿಕ ಮತ್ತು ಸಂಗೀತ. ಈ ನಾಲ್ಕು ಕ್ಷೇತ್ರಗಳಲ್ಲಿ ಅತ್ಯುತ್ತಮ ಪ್ರತಿಭೆ ಪ್ರದರ್ಶಿಸಿದ ತಲಾ ಇಬ್ಬರು ಮಕ್ಕಳಂತೆ ಜಿಲ್ಲೆಯಲ್ಲಿ ಒಟ್ಟು 8 ಮಕ್ಕಳನ್ನು ಆಯ್ಕೆ ಮಾಡಲಾಗುತ್ತದೆ.

ಪ್ರಶಸ್ತಿ ವಿಜೇತ ಪ್ರತಿಯೊಬ್ಬ ಮಗುವಿಗೆ ತಲಾ 10 ಸಾವಿರ ರೂ. ಗಳ ನಗದು ಬಹುಮಾನ ನೀಡಿ ಗೌರವಿಸಲಾಗುವುದು.ಅರ್ಹ ಮಕ್ಕಳು ಅರ್ಹ ಮಕ್ಕಳು ನಗರದ ಗಾಂಧಿ ಭವನದ ಎದುರಿಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಕೆಗೆ ಸೆ. 30 ಕೊನೆಯ ದಿನವಾಗಿದೆ.

ಅರ್ಜಿಗಳನ್ನು ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿಯೇ ಭರ್ತಿ ಮಾಡಿ ಸಲ್ಲಿಸಬೇಕಾಗಿದ್ದು, ನಿಗದಿತ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿವೇತನ: ಆನ್‌ಲೈನ್ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ


■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2026–27ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ಸಮುದಾಯದ ವಿದ್ಯಾರ್ಥಿಗಳಿಗೆ ವಿವಿಧ ಯೋಜನೆಗಳಡಿ ಅರ್ಜಿ ಸಲ್ಲಿಸುವ ಕಾಲಾವಕಾಶವನ್ನು ಸೆ.30 ರವರೆಗೆ ವಿಸ್ತರಿಸಿದೆ.

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ/ಅರೆಅಲೆಮಾರಿ ಜನಾಂಗದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಹಾಗೂ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಸೆ. 30 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಕೆ ವೆಬ್‌ಸೈಟ್: https://ssp.postmatric.karnataka.gov.in/ ಯೋಜನೆಗಳ ವಿವರ ಹಾಗೂ ಸರ್ಕಾರಿ ಆದೇಶಗಳ ಮಾಹಿತಿಗಾಗಿ:https://bcwd.karnataka.gov.in ಇಲಾಖಾ ಸಹಾಯವಾಣಿ ಸಂ:8050770004 ಇಮೇಲ್ ವಿಳಾಸ: bcwd-helpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂ:1902 ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಅರ್ಹ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಿಗದಿತ ದಿನಾಂಕದೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಪ್ರಭಾರಿಯಾಗಿ ನಂದಗಾಂವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 2018ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿ ಮಹಾನಿಂಗ ನಂದಗಾಂವಿ ಅವರು ವಿಜಯಪುರದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಹುದ್ದೆಯ ಹೆಚ್ಚುವರಿ ಪ್ರಭಾರವನ್ನು ಸೆ.2ರಂದು ವಹಿಸಿಕೊಂಡಿದ್ದಾರೆ.

ವಿಜಯಪುರ ಲೋಕಾಯುಕ್ತ ಕಚೇ–ರಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಯಾವುದೇ ದೂರುಗಳು ಅಥವಾ ಅಹವಾಲುಗಳನ್ನು ಹೊಂದಿದ್ದಲ್ಲಿ ನೇರವಾಗಿ ಕಚೇರಿಗೆ ಭೇಟಿ ನೀಡಿ ಸಲ್ಲಿಸಬಹುದಾಗಿದೆ. ಅಲ್ಲದೆ, ಮೊಬೈಲ್ ಸಂಖ್ಯೆ 9364062528 ಅಥವಾ ಕಚೇರಿ ದೂರವಾಣಿ ಸಂಖ್ಯೆ 08352–295074 ಸಂಪರ್ಕಿಸಬಹುದಾಗಿದೆ ಎಂದು ಲೋಕಾಯುಕ್ತ ಕಚೇರಿ ಪ್ರಕಟಣೆ ತಿಳಿಸಿದೆ.

## ಹೊಸ ಪಠ್ಯಕ್ರಮ ತರಬೇತಿ ಕಾರ್ಯಕ್ರಮದಲ್ಲಿ ಡಯಟ್ ಪ್ರಾಚಾರ್ಯೆ ಎಸ್.ಎ. ಮುಜಾವರ ಹೇಳಿಕೆ

# ಹೊಸ ಪಠ್ಯಕ್ರಮ: ಶಿಕ್ಷಕರಲ್ಲಿ ಬದಲಾವಣೆ ಮನೋಭಾವ ಬೆಳೆಸಬೇಕು

■ ಉದಯರಶ್ಮಿ ದಿನಪತ್ರಿಕೆ



ನಿಡಗುಂದಿ: ಶಿಕ್ಷಣ ಕ್ಷೇತ್ರದಲ್ಲಿ ನಿರಂತರವಾಗಿ ಆಗುತ್ತಿರುವ ಬದಲಾವಣೆಗಳಿಗೆ ಶಿಕ್ಷಕರು ಹೊಂದಿಕೊಳ್ಳುವುದರ ಜೊತೆಗೆ, ಹೊಸ ಪಠ್ಯಕ್ರಮದ ಕ್ಲಿಷ್ಟತೆ ಹಾಗೂ ಕಠಿಣತೆಯನ್ನು ಅರ್ಥಮಾಡಿಕೊಂಡು ಪರಿಣಾಮಕಾರಿಯಾಗಿ ಬೋಧಿಸುವ ಸಿದ್ಧತೆ ಹೊಂದಬೇಕು ಎಂದು ಡಯಟ್ ಪ್ರಾಚಾರ್ಯೆ ಎಸ್.ಎ. ಮುಜಾವರ ಹೇಳಿದರು.

ನಿಡಗುಂದಿಯ ಕಮದಾಳ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಿಡಗುಂದಿ ತಾಲ್ಲೂಕಿನ ಶಿಕ್ಷಕರಿಗಾಗಿ ವಿಜ್ಞಾನ ಹಾಗೂ ಗಣಿತ ವಿಷಯದ ಹೊಸ ಪಠ್ಯಕ್ರಮ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಬುಧವಾರ ಅವರು ಮಾತನಾಡಿದರು.

6, 7 ಮತ್ತು 8ನೇ ತರಗತಿಗಳ ಪಠ್ಯಕ್ರಮದಲ್ಲಿ ಆಗಿರುವ ಬದಲಾವಣೆಗಳನ್ನು ಶಿಕ್ಷಕರು ಸಮಗ್ರವಾಗಿ ಅರಿತುಕೊಳ್ಳಬೇಕು. ಕೇಂದ್ರದ ಎನ್ ಸಿ ಇಆರ್ ಟಿ ಪಠ್ಯಕ್ರಮ ಆಧಾರದಲ್ಲಿಯೇ ಈ ರಾಜ್ಯ ಪಠ್ಯಕ್ರಮವಿದೆ. ಮೊದಲಿನಂತೆ ಸಾಂಪ್ರದಾಯಿಕವಾಗಿ ಬೋಧಿಸಲು ಅಸಾಧ್ಯ, ವಿದ್ಯಾರ್ಥಿಗಳ ಕಲಿಕೆಯನ್ನು ಜೀವನದ ನಿತ್ಯದ ಚಟುವಟಿಕೆಗಳಿಗೆ ಅನ್ವಯಿಸುವಂತೆ ಮಾಡುವುದು ಇಂದಿನ ಶಿಕ್ಷಣದ ಪ್ರಮುಖ ಉದ್ದೇಶವಾಗಿದೆ ಎಂದರು.

ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನಕ್ಕೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ ವಿಜ್ಞಾನ ವಿಷಯವನ್ನು ವಿದ್ಯಾರ್ಥಿಗಳ ದಿನನಿತ್ಯದ ಅನುಭವಗಳೊಂದಿಗೆ ಬೆಸೆಯಬೇಕು. ಪಠ್ಯಕ್ರಮದ ಕ್ಲಿಷ್ಟತೆ ಮತ್ತು ಕಠಿಣ–ತೆಯನ್ನು ಸರಳ ವಿಧಾನಗಳ ಮೂಲಕ ವಿದ್ಯಾರ್ಥಿಗಳಿಗೆ ಅರ್ಥವಾಗುವಂತೆ ಬೋಧಿಸುವ ಕೌಶಲ್ಯವನ್ನು ಶಿಕ್ಷಕರು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಡಯಟ್ ಹಿರಿಯ ಉಪನ್ಯಾಸಕಿ ಗೀತಾ ಕುಲಕರ್ಣಿ, ಎಂ.ವಿ. ಹಿರೇಮಠ, ಕ್ಷೇತ್ರ ಸಮನ್ವಯಾಧಿಕಾರಿ ಸುನಿಲ ನಾಯಕ, ಸಂಪನ್ಮೂಲ ವ್ಯಕ್ತಿ ವಿಜಯೇಂದ್ರ ಪುರೋಹಿತ, ಬಿ.ಎಸ್. ಅವಟಿ, ತಸ್ಲೀಮ್ ಮಕಾನದಾರ್, ಭಾರತಿ ಪಾಟೀಲ, ಸುರೇಶ ಹುರಕಡ್ಲಿ, ಎಸ್.ಎಸ್. ಕಾರಕೂನ, ಎಸ್.ಎಂ. ಕಮತಗಿ, ಪ್ರಕಾಶ ದೋರನಳ್ಳಿ, ಶಿಕ್ಷಕ ಸಂಘಟನೆಯ ಅಧ್ಯಕ್ಷ ಸಲೀಂ ದಡೆದ, ಎಂ.ಎಂ. ಮುಲ್ಲಾ ಇದ್ದರು.

# 5 ರಿಂದ ಪ್ರಜಾ ಸೇವಾ ಅಂದೋಲನ ಶಾಸಕ ಯಶವಂತರಾಯಗೌಡ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಸೆ.5 ರಿಂದ ಇಂಡಿ ತಾಲೂಕಿನಲ್ಲಿ ಪ್ರಜಾ ಸೇವಾ ಅಂ–ದೋಲನ ನಡೆಯಲಿದ್ದು ಅಂದು ರೈತರು, ಸಾರ್ವಜನಿಕರು ತಮ್ಮ ಅಹವಾಲುಗಳನ್ನು ನಿಗದಿತ ನಮೂನೆಯಲ್ಲಿ ಲಿಖಿತ ರೂಪದಲ್ಲಿ ಸಂಬಂಧಪಟ್ಟ ಗ್ರಾಮ ಮತ್ತು ಸುತ್ತಮುತ್ತಲಿನ ಗ್ರಾಮದವರು ಪಾಲ್ಗೊಳ್ಳಲು ಶಾಸಕ ಯಶವಂತರಾಯಗೌಡ ಪಾಟೀಲರು ತಿಳಿದರು.

ನಗರದ ತಾ.ಪಂ ಸಭಾಭವನದಲ್ಲಿ ನಡೆದ ಕುಡಿಯುವ ನೀರು ಮತ್ತು ಪ್ರಜಾ ಸೇವೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದರು.

ಇಂಡಿ ನಗರದಲ್ಲಿ ಸೆ. 5 ರಂದು ಪ್ರಜಾ ಸೇವೆ ಕಾರ್ಯಕ್ರಮ 1 ನೇ ಶನಿವಾರ ಶ್ರೀ ಶಾಂತೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ನಡೆಯಲಿದೆ ಎಂದರು. ತಾಲೂಕಿನಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು. ಕೃಷ್ಣಾ ಕಾಲುವೆಯ ನೀರು ಮತ್ತು ಅದರ ನಿರ್ವಹಣೆ ಕುರಿತು ಕೃಷ್ಣಾ ಮೇಲ್ದಂಡೆ ಯೋಜನೆ ಅಧಿಕಾರಿಗಳು ಕ್ರಮ ವಹಿಸಬೇಕು. ಎಲ್ಲಿಯೂ ನೀರಿನ ತೊಂದರೆ ಯಾಗದಂತೆ ಜಾಗರೂಕತೆ ವಹಿಸಲು ತಿಳಿಸಿದರು.ಭಾರತ ಜೋಡೊ ಅಭಿಯಾನ, ಶಿಕ್ಷಕರ ದಿನಾಚರಣೆ, ಹಾಗೂ ವಿಜಿ ರಾಮಜಿ ಯೋಜನೆ ಕುರಿತು ಚರ್ಚಿಸಿದರು.

ತಾಲೂಕಿನ ವಿವಿಧ ಗ್ರಾಮಗಳಲ್ಲಿನ ಬರ ಪರಿಸ್ಥಿತಿ ಕುಡಿಯುವ ನೀರಿನ ಲಭ್ಯತೆ ಹಾಗೂ ಸಾರ್ವಜನಿಕರು ಎದು–ರಿಸುತ್ತಿರುವ ಸಮಸ್ಯೆ ಕುರಿತು ಅಧಿಕಾ–ರಿಗಳಿಂದ ಮಾಹಿತಿ ಪಡೆದರು. ತಾ.ಪಂ ಇಒ ಮಹಾದೇವಪ್ಪ ಏವೂರ ಮಾತನಾಡಿ ಎರಡನೆಯ ಶನಿವಾರ ಅಥರ್ಗಾ ಗ್ರಾಮದ ಗ್ರಾ.ಪಂ ಕಾರ್ಯಾಲಯ ಸಭಾಭವನದಲ್ಲಿ ಮೂರನೆಯ ಶನಿವಾರ ಸಾಲೋಟಗಿ ಗ್ರಾಮದ ಶ್ರೀ ಶಿವಯೋಗೀಶ್ವರ ದೇವಸ್ಥಾನದ ಆವರಣದಲ್ಲಿ ನಾಲ್ಕನೆಯ ಶನಿವಾರ ಹೊರ್ತಿ ಗ್ರಾಮದ ಗ್ರಾ.ಪಂ ಕಾರ್ಯಾಲಯದಲ್ಲಿ ಪ್ರಜಾ ಸೇವಾ ಕಾರ್ಯಕ್ರಮ ನಡೆಯಲಿದೆ ಎಂದರು. ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಮೂರ್ತಿ, ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ, ಯೋಜನಾಧಿಕಾರಿ ನಂದೀಪ ರಾಠೋಡ, ಸಂಜಯ ಖಡಗೇಕರ, ಪ್ರಕಾಶ ರಾಠೋಡ, ಎಇಇ ಹೆಸ್ಕಾಂ ಎಸ್.ಆರ್.ಮೆಂಡೆಗಾರ, ತೋಟಗಾರಿಕೆಯ ಸತೀಶ ಬಡಿಗೇರ, ಲೋಕೋಪಯೋಗಿ ಇಲಾಖೆಯ ದಯಾನಂದ ಮಠ, ಕೆಬಿಜೆಎನ್ ಎಲ್ ಅಧಿಕಾರಿಗಳಾದ ಸುರೇಶ ಯಾತನೂರ, ಎಸ್.ಎಂ. ಅಲ್ದಿ, ಎನ್.ವಿ.ಕಾಟೇ, ಸಂತೋಷ ದಾಯಿಗೋಡೆ, ಪಿ.ಎಂ.ಪೂಜಾರಿ ಮತ್ತಿತರರಿದ್ದರು.

## ಜಮ್ಮಲದಿನ್ನಿ ಕ್ರಾಸ್ ಬಳಿ ನಡೆದ । ಘಟನೆ ಪತ್ನಿಗೆ ಗಂಭೀರ ಗಾಯ

# ನಿಲ್ಲಿಸಿದ್ದ ಟಿಪ್ಪರ್‌ಗೆ ಬೈಕ್ ಡಿಕ್ಕಿ! ಸವಾರ ಸ್ಥಳದಲ್ಲೇ ಸಾವು

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ರಸ್ತೆ ಬದಿಯಲ್ಲಿ ಯಾವುದೇ ಮುನ್ಸೂಚನೆ, ಇಂಡಿಕೇಟರ್ ಅಥವಾ ಸಿಗ್ನಲ್ ಇಲ್ಲದೆ ನಿಲ್ಲಿಸಿದ್ದ ಟಿಪ್ಪರ್ ವಾಹನಕ್ಕೆ ಹಿಂದಿನಿಂದ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದು, ಹಿಂಬದಿ ಕುಳಿತಿದ್ದ ಪತ್ನಿಗೆ ಗಂಭೀರ ಗಾಯಗಳಾದ ಘಟನೆ ಬುಧವಾರಂದು ಮಧ್ಯಾಹ್ನ ತಾಳಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ಜಮ್ಮಲದಿನ್ನಿ ಕ್ರಾಸ್ ಬಳಿ ನಡೆದಿದೆ.

ಮೃತನನ್ನು ತಾಳಿಕೋಟೆ ತಾಲೂಕಿನ ಅಸ್ಕಿ ಗ್ರಾಮದ ಲಾಲಸಾಬ ಚಂದಾಸಾಬ ಗೋಗಿ (40) ಎಂದು ಗುರುತಿಸಲಾಗಿದೆ. ಅವರ ಪತ್ನಿ ಆಸ್ಮಾ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಮುದ್ದೇಬಿಹಾಳ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಲಾಲಸಾಬ ಹಾಗೂ ಅವರ ಪತ್ನಿ ಆಸ್ಮಾ ಅವರು ತಮ್ಮ ಮಗನನ್ನು ಭೇಟಿಯಾಗಲು ಇಣಚಗಲ್‌ನ ಅಲ್ಪಸಂಖ್ಯಾತರ ಶಾಲೆಗೆ ಕೆಎ–28, ಎಚ್‌ಜೆ–8170 ಸಂಖ್ಯೆಯ ಹೋಂಡಾ ಶೈನ್ ಬೈಕ್‌ನಲ್ಲಿ ತಾಳಿಕೋಟೆಯಿಂದ ಮುದ್ದೇಬಿಹಾಳ ಕಡೆಗೆ ತೆರಳುತ್ತಿದ್ದ ಸಮಯದಲ್ಲಿ ಜಮ್ಮಲದಿನ್ನಿ ಕ್ರಾಸ್ ಸಮೀಪ ರಸ್ತೆ ಮೇಲೆ ನಿಲ್ಲಿಸಲಾಗಿದ್ದ ಕೆಎ–36, ಸಿ–1247 ಸಂಖ್ಯೆಯ ಅಶೋಕ ಲೇಲ್ಯಾಂಡ್ ಟಿಪ್ಪರ್‌ಗೆ ಹಿಂದಿನಿಂದ ಡಿಕ್ಕಿ ಹೊಡೆದಿದ್ದಾರೆ ಎನ್ನಲಾಗಿದೆ. ಡಿಕ್ಕಿಯ ಪರಿಣಾಮ ಬೈಕ್ ಸವಾರ ಲಾಲಸಾಬ ಅವರಿಗೆ ತಲೆ ಹಾಗೂ ಕುತ್ತಿಗೆಗೆ ಗಂಭೀರ ಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಬೈಕ್‌ನ ಹಿಂಬದಿ ಕುಳಿತಿದ್ದ ಪತ್ನಿ ಆಸ್ಮಾ ಅವರ ಬಲಗಾಲಿಗೆ ಗಂಭೀರ ಗಾಯವಾಗಿದ್ದು, ತಲೆಗೆ ಒಳಪೆಟ್ಟಾಗಿದೆ.

ಈ ಕುರಿತು ಟಿಪ್ಪರ್ ಚಾಲಕ ರಸ್ತೆ ಮೇಲೆ ವಾಹನವನ್ನು ಯಾವುದೇ ನಿಲುಗಡೆ ಸೂಚನೆ, ಇಂಡಿ–ಕೇಟರ್ ಅಥವಾ ಮುನ್ಸೂಚನೆ ಇಲ್ಲದೆ ನಿಲ್ಲಿಸಿದ್ದರಿಂದ ಬೈಕ್ ಸವಾರ ಅಜಾಗುರುಕತೆಯಿಂದ ಅತೀ ವೇಗದ ರೀತಿಯಲ್ಲಿ ಬೈಕ್ ಚಲಾಯಿಸಿದ್ದರಿಂದ ಅಪಘಾತ ಸಂಭವಿಸಿದೆ ಎಂದು ಮೃತನ ಸಹೋದರ ಅಲ್ಲಾಭಕ್ಷ ಚಂದಾಸಾಬ ಗೋಗಿ ತಾಳಿಕೋಟೆ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಘಟನಾ ಸ್ಥಳಕ್ಕೆ ಸಿಪಿಐ ಮಹ್ಮದಪಸಿಉದ್ದೀನ್, ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರು ಭೇಟಿ ನೀಡಿದ್ದು ಈ ಕುರಿತು ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಮಾಪನೆಗೊಂಡ ಸಹಕಾರ ಸಂಘಗಳ ನೋಂದಣಿ ರದ್ದತಿ ಪ್ರಕ್ರಿಯೆ ಆರಂಭ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಾಲೂಕಿನಲ್ಲಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸದೆ ನಿಷ್ಕ್ರಿಯವಾಗಿರುವ ವಿವಿಧ ಸಹಕಾರ ಸಂಘಗಳನ್ನು ಸಮಾಪನಗೊಳಿಸುವ ಪ್ರಕ್ರಿಯೆ ಆರಂಭವಾಗಿದ್ದು, ಈ ಸಂಬಂಧ ಆಕ್ಷೇಪಣೆ ಸಲ್ಲಿಸಲು ಸಾರ್ವಜನಿಕರು ಹಾಗೂ ಸದಸ್ಯರಿಗೆ 7 ದಿನಗಳ ಕಾಲಾವಕಾಶ ನೀಡಲಾಗಿದೆ.

ಈ ಸಂಘಗಳಿಗೆ ಸಂಬಂಧಿಸಿದಂತೆ ಸದಸ್ಯರು, ಸಾರ್ವಜನಿಕರು ಅಥವಾ ಇತರೆ ಹಕ್ಕುದಾರರು ತಮ್ಮ ಹಕ್ಕು–ಬಾಧ್ಯತೆಗಳು ಹಾಗೂ ಕೊಡತಕ್ಕ–ಬರತಕ್ಕ ಬಾಬುಗಳ ಕುರಿತು ಮಾಹಿತಿ ಅಥವಾ ಆಕ್ಷೇಪಣೆಗಳಿದ್ದರೆ ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಅ ರ್ಜಿ ಗ ' ಳ ' ನ ' ್ನ ಸಮಾಪನಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, ವಿಜಯಪುರ ಉಪವಿಭಾಗ, ವಿಜಯಪುರ. ಈ ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಸಮಾಪನೆಗೊಳ್ಳಲಿರುವ ಸಹಕಾರ ಸಂಘಗಳ ವಿವರ: ನಗರದ ಸಹಕಾರ ಸಂಘಗಳಾದ ರಕ್ಷಾ ಪತ್ತಿನ ಸಹಕಾರ ಸಂಘ, ವಿದ್ಯಾನಗರ ಗೃಹ ನಿರ್ಮಾಣ ಸಹಕಾರ ಸಂಘ, ರೇಣುಕಾ ಪತ್ತಿನ ಸಹಕಾರ ಸಂಘ, ವಿಜಯಪುರ ಶಹರ ಟಿನ್ ತಗಡಿನ ಸಾಮಾನುಗಳ ತಯಾರಕರ ಕೂಲಿಕಾರರ ಸಹಕಾರ ಸಂಘ, ಸತ್ಕಾರ ಪತ್ತಿನ ಸಹಕಾರ ಸಂಘ ಹಾಗೂ ಭಾರತ ಕೋಳಿ ಸಾಕಾಣಿಕೆ ಮತ್ತು ಮಾರಾಟಗಾರರ ಸಹಕಾರ ಸಂಘ, ಅಫಜಲಪುರ ಟಕ್ಕೆಯ ಕಲ್ಪವೃಕ್ಷ ಗ್ರಾಹಕರ ಸಹಕಾರ ಸಂಘ, ಹಂಚಿನಾಳ ಗ್ರಾಮದ ಬಂಜಾರಾ ಮತ್ತು ಮಹಿಳಾ ಕೈಗಾರಿಕಾ ಸಹಕಾರ ಸಂಘ, ಹುಣಶ್ಯಾಳ ಗ್ರಾಮದ ಹುಣಶ್ಯಾಳ ಹಾಲು ಉತ್ಪಾದಕರ ಸಹಕಾರ ಸಂಘ ಹಾಗೂ ಶಿವಣಗಿ ಗ್ರಾಮದ ಶಿವಣಗಿ ವಿವಿಧೋದ್ದೇಶಗಳ ಸಹಕಾರ. ನಿಗದಿತ 7 ದಿನಗಳೊಳಗೆ ಯಾವುದೇ ಆಕ್ಷೇಪಣೆಗಳು ಬರದಿದ್ದಲ್ಲಿ, ನಿಯಮಾನುಸಾರ ಸಂಘಗಳ ನೋಂದಣಿ ರದ್ದುಪಡಿಸಲಾಗುತ್ತದೆ. ಬಳಿಕ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯಪುರ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಡಾ. ಗಂಗಾಧರ ಸಂಬಣ್ಣಿ ಅಭಿಮತ

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಕ್ರೀಡೆಗಳು ಪೂರಕ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಕ್ರೀಡೆಗಳು ಅತ್ಯಂತ ಪೂರಕವಾಗಿವೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಗಂಗಾಧರ ಎಸ್. ಸಂಬಣ್ಣಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವಿಜಯಪುರ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರದ ಸಹಯೋಗದಲ್ಲಿ ನಗರದ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 2026–27ನೇ ಸಾಲಿನ ವಿಜಯಪುರ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು. ಈ ದೇಶದ ಯುವಕ–ಯುವತಿಯರು ಕ್ರೀಡಾ ಚಟುವಟಿ–ಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಸದೃಢ ದೇಹವನ್ನು ಹೊಂದುವುದರ ಮೂಲಕ, ಬಲಶಾಲಿ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

ಭಾರತ ಸರ್ಕಾರದ ರಾಷ್ಟ್ರೀಯ ವಚನ ಸಮಿತಿ ಸದಸ್ಯ ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಡಾ. ಜಾವೀದ್ ಎಂ. ಜಮಾದಾರ್ ಅಧ್ಯಕ್ಷತೆ ವಹಿಸಿ, ಪ್ರತಿಯೊಬ್ಬ ಕ್ರೀಡಾಪಟುವು ಕ್ರೀಡೆಯಲ್ಲಿ ನಿರಂತರವಾಗಿ ಭಾಗವಹಿಸಿ, ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಗಳಿಸುವ ಮೂಲಕ ದೇಶದ ಹೆಸರನ್ನು ಉತ್ತುಂಗಕ್ಕೆ ಒಯ್ಯಬೇಕು ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ್ ದೈವಾಡಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಧರ್ ಜೋಶಿ ನಿರೂಪಿಸಿ, ವಂದಿಸಿದರು.

ವೇದಿಕೆಯಲ್ಲಿ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತರಾದ ಸಂಜೀವ್ ಸಿ. ಖೋತ್, ಸಂತೋಷ್ ಕುಮಾರ್ ಎಸ್. ನಿಗಡಿ, ನ್ಯಾಯವಾದಿಗಳಾದ ನಾಗರಾಜ್ ಪಿ. ಲಂಬು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ್ ಬೋವಿ ಹಾಗೂ ಇಲಾಖಾ ಅಧೀಕ್ಷಕಿ ಪ್ರಿಯಾಂಕ ಜಿ. ಸೇರಿದಂತೆ ವಿವಿಧ ಶಾಲಾ–ಕಾಲೇಜುಗಳಿಂದ ಆಗಮಿಸಿದ ತೀರ್ಪುಗಾರರು, ದೈಹಿಕ ಶಿಕ್ಷಣ ಶಿಕ್ಷಕರು, ಇಲಾಖೆಯ ತರಬೇತುದಾರರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಅಪಾರ ಸಂಖ್ಯೆಯ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

# ಪ್ರತಿಯೊಬ್ಬರೂ ನೇತ್ರದಾನಕ್ಕೆ ಮುಂದಾಗಿ :ರಮ್ಯಾ ಕಾರಜೋಳ

■ ಉದಯರಶ್ಮಿ ದಿನಪತ್ರಿಕೆ



**■ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ನೇತ್ರದಾನ ಜಾಗೃತಿ ಕಾರ್ಯಕ್ರಮ**

ವಿಜಯಪುರ: ನೇತ್ರ ದಾನ ಮಹಾದಾನ ಆ ನಿಟ್ಟಿನಲ್ಲಿ ನೇತ್ರದ ದಾನದಿಂದ ಸಾವಿನ ನಂತರ ನಮ್ಮ ಕಣ್ಣುಗಳು ಬೇರೆಯವರ ಮೊದಲ ನೋಟವಾಗುತ್ತವೆ ಎಂದು ಶ್ರೀ.ಬಿ.ಎಮ್.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ನೇತ್ರಶಾಸ್ತ್ರ ವಿಭಾಗದ ರಮ್ಯಾ ಕಾರಜೋಳ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್ ಬಿ ಕಲಾ ಮತ್ತು ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ಬಿ.ಎಲ್.ಡಿ.ಇ ಶ್ರೀ.ಬಿ.ಎಮ್.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ನೇತ್ರಶಾಸ್ತ್ರ ವಿಭಾಗದ ನೇತ್ರದಾನ ಪಾಕ್ಷಿಕ ಆಚರಣೆ ಹಾಗೂ ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಸಹಯೋಗದಲ್ಲಿ ಸೆ.03 ರಂದು 'ನೇತ್ರದಾನ ಮಾಡಿ ಇಬ್ಬರ ಅಂಧರ ಬಾಳಿಗೆ ಬೆಳಕಾಗಿರಿ' ಎಂಬ ಧ್ಯೇಯ ವಾಕ್ಯದಡಿ ನೇತ್ರದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಈ ವೇಳೆಯಲ್ಲಿ ಮಾತನಾಡಿದ ಅವರು, ನೇತ್ರದಾನದ ಮಹತ್ವ ಮತ್ತು ಇದರಿಂದಾಗುವ ಪ್ರಯೋಜನಗಳು ಮತ್ತು ಅವುಗಳ ಸಂರಕ್ಷಣೆ ಬಗ್ಗೆ ಸಮಗ್ರವಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಉಪಪ್ರಾಚಾರ್ಯ ಡಾ.ಅನೀಲ ಭೀ.ನಾಯಕ ಅಧ್ಯಕ್ಷತೆ ವಹಿಸಿ ಮಾತನಾಡಿ, ದಾನಗಳಲ್ಲಿ ಶ್ರೇಷ್ಠ ನೇತ್ರ ದಾನ ಆ ನಿಟ್ಟಿನಲ್ಲಿ ಪ್ರತಿಯೊಬ್ಬರು ನೇತ್ರದಾನಕ್ಕೆ ಮುಂದಾಗಿ ಇತರರ ಬಾಳಿಗೆ ಬೆಳಕಾಗುವುದು ಅಮೂಲ್ಯವಾದದ್ದು, ಪ್ರತಿಯೊಬ್ಬರು ನೇತ್ರದಾನಕ್ಕೆ ನೊಂದಾಯಿಸಲು ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಧರ್ಮಗುರು ಪ್ರಸಾದ ಎಂ.ಪಿ, ಡಾ.ಮಿಲನ್ ರಾಠೋ ವೈದ್ಯಾಧಿಕಾರಿಗಳು ಮಹಾವಿದ್ಯಾಲಯದ ಬೋಧಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಡಾ.ಮಹಾಂತೇಶ ಬಿರಾದಾರ ಗೆ ಅಪ್ಪ ರಾಜ್ಯ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಫ.ಗು ಹಳಕಟ್ಟಿ ಸಂಸ್ಥೆಯ ಕಾರ್ಯದರ್ಶಿ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಹಾಂತೇಶ ಬಿರಾದಾರ ಅವರಿಗೆ ಅಪ್ಪ ರಾಜ್ಯ ಪ್ರಶಸ್ತಿಗೆ ಲಭಿಸಿದೆ.

ತಾಲೂಕಿನ ಬೋರಗಿ ಗ್ರಾಮದ ನಬಿರೋಶನ್ ಪ್ರಕಾಶನ ವತಿಯಿಂದ ಪ್ರತಿ ವರ್ಷ ದಿ.ಖತಾಲಸಾಬ ಆಲಗೂರ (ಬೋರಗಿ) ಇವರ ಸ್ಮರಣಾರ್ಥವಾಗಿ ಈ ಪ್ರಶಸ್ತಿ ನೀಡಲಾಗುತ್ತದೆ. ಪ್ರಶಸ್ತಿಯೂ ರೂ.5ಸಾವಿರ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ.

ಬರಹಗಾರ, ಶರಣ ಚಿಂತಕರಾಗಿರುವ ಡಾ.ಮಹಾಂತೇಶ ಬಿರಾದಾರ ಇವರ ಸಾಮಾಜಿಕ ಸೇವೆಯನ್ನು ಪರಿಗಣಿಸಿ 21ಸೆಪ್ಟೆಂಬರ್ ರಂದು ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕೃಷ್ಣರಾಜ ಪರಿಷತ್ಮಂದಿರದಲ್ಲಿ ನಡೆಯುವ ಅಪ್ಪ ರಾಜ್ಯ ಪ್ರಶಸ್ತಿ ಪ್ರದಾನ ಪೊಲೀಸ್ ಕಲಾಸಂಗಮ ಹಾಗೂ ಸಾಂಸ್ಕೃತಿಕ ಕಲಾ ಸಂಭ್ರಮ ಸಮಾರಂಭದಲ್ಲಿ, ನಾಡಿನ ಗಣ್ಯಾತೀಗಣ್ಯರ ಹಾಗೂ ಪೊಲೀಸ್ ಅಧಿಕಾರಿಗಳ ಸಮ್ಮುಖದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ಎಂದು ಮೌಲಾಲಿ ಆಲಗೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಮಾರ್ಟ ಆಗಿ ಓದಿ, ನೀಟ್ ಸುಲಭವಾಗಿ ಪಾಸಾಗಿ :ಗೋಡಿಹಾಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನೀಟ್ ಪರೀಕ್ಷೆ ಎಂದರೆ ಕೆಲವರಿಗೆ ಕಬ್ಬಿಣದ ಕಡಲೆಯಾದರೆ ಸ್ಮಾರ್ಟ ಆಗಿ ಓದುವವ–ರಿಗೆ ಸುಲಭದ ತುತ್ತು. ಯಾವ ವಿಷಯವನ್ನು ಯಾವ ರೀತಿಯಾಗಿ ಓದಬೇಕು ಎನ್ನುವುದರ ಪರಿಜ್ಞಾನ ನಮ್ಮಲ್ಲಿ ಮೂಡಿಸಿಕೊಂಡರೆ ಸರಳವಾಗಿ ನೀಟ್ ಪಾಸು ಮಾಡಿ ಎಂಬಿಬಿಎಸ್ ಸೀಟು ಪಡೆಯಬಹುದು ಎಂದು ಈ ಬಾರಿಯ ನೀಟ್ ಪರೀಕ್ಷೆಯಲ್ಲಿ 631 ಅಂಕಗಳನ್ನು ಪಡೆದು ಬೆಂಗಳೂರು ಮೆಡಿಕಲ್ ಕಾಲೇಜ್ ಆಂಡ್ ರೀಸರ್ಚ ಇನ್ಸಿಟ್ಯೂಟ್‌ಗೆ ಆಯ್ಕೆಯಾದ ಸಲ್ಮಾನ ಗೋಡಿಹಾಳ ಹೇಳಿದರು.

ನಗರದ ಎಕ್ಸಲಂಟ್ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡಿ ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದಕ್ಕಾಗಿ ಕಾಲೇಜಿನ ವತಿಯಿಂದ ಸನ್ಮಾನ ಸ್ವೀಕರಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು; ನಮ್ಮಲ್ಲಿರುವ ಅತೀ ದೊಡ್ಡ ಸಮಸ್ಯೆ ಎಂದರೆ ಅತಿಯಾದ ಆತ್ಮವಿಶ್ವಾಸ. ನಾನು ಮಾಡುತ್ತೇನೆ ಬಿಡು ಇಂದಲ್ಲ ನಾಳೆ ಆಗುತ್ತೆ ಬಿಡು ಎನ್ನುವ ರೀತಿಯಲ್ಲಿ ಅಧ್ಯಯನ ಮಾಡಿದರೆ ಯಶಸ್ವಿಯಾಗುವುದಕ್ಕೆ ಸಾಧ್ಯವಿಲ್ಲ. ಅತಿಯಾದ ಆತ್ಮವಿಶ್ವಾಸ ಅನಾವಶ್ಯಕ ಆಘಾತಕ್ಕೆ ಕಾರಣವಾಗುತ್ತದೆ. ಆದ್ದರಿಂದ ಅದರಿಂದ ಹೊರ ಬರುವುದು ಉತ್ತಮ. ಅದರ ಜೊತೆಗೆ ಭೌತಶಾಸ್ತ್ರ, ರಸಾಯನಶಾಸ್ತ್ರ ಹಾಗೂ ಜೀವಶಾಸ್ತ್ರ ವಿಷಯಗಳನ್ನು ಅತ್ಯಂತ ಆಧ್ಯತೆಯ ವಿಷಯವನ್ನಾಗಿ ಅಭ್ಯಾಸ ಮಾಡಿದಾಗ ಮಾತ್ರ ನೀಟ್ ಫಲಿತಾಂಶದಲ್ಲಿ ಏರಿಕೆ ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಚೇರ್‌ಮನ್ ಬಸವರಾಜ ಕೌಲಗಿ ಮಾತನಾಡಿ; ಸಲ್ಮಾನ ಗೋಡಿಹಾಳ ಮಾಡಿದ ರೀತಿಯಲ್ಲಿ ಎಲ್ಲ ವಿದ್ಯಾರ್ಥಿಗಳು ಅಧ್ಯಯನ ಮಾಡಿದರೆ ಅಪ್ಪ ಅಮ್ಮನ ಕನಸನ್ನು ಈಡೇರಿಸುವುದರ ಜೊತೆಗೆ ನಿಮ್ಮ ಭವಿಷ್ಯವನ್ನು ಕಟ್ಟಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ. ಹೀಗಾಗಿ ಎಲ್ಲ ವಿದ್ಯಾರ್ಥಿಗಳು ಇಷ್ಟಪಟ್ಟು ಓದಿ ಅತ್ಯುತ್ತಮ ಅಂಕಗಳನ್ನು ಗಳಿಸಿಕೊಂಡು ಉನ್ನತ ಕಾಲೇಜುಗಳಲ್ಲಿ ಸೀಟುಗಳನ್ನು ಗಿಟ್ಟಿಕೊಳ್ಳಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಮಂಜುನಾಥ ಮ. ಜುನಗೊಂಡ, ಶೈಕ್ಷಣಿಕ ಸಂಯೋಜಕ ಮಂಜುನಾಥ ತುಮ್ಮರಮಟ್ಟಿ ಉಪಸ್ಥಿತರಿದ್ದರು.

# ಡಾ.ಅಂಬೇಡ್ಕರ ನಗರ ಕಂದಾಯ ಗ್ರಾಮವನ್ನಾಗಿ ಮಾಡಲು ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಅನೌಪಚಾ–ರಿಕ ಶಿಕ್ಷಣ ಸಂಸ್ಥೆ ಬಿಜಾಪುರ ನಗರ ಸ್ಲಂ ಅಭಿವೃದ್ಧಿ ಸಮಿತಿ(ರಿ) ಹಾಗೂ ಡಾ॥ ಬಿ ಆರ್ ಅಂಬೇಡ್ಕರ ನಗರದ ನಿವಾಸಿಗಳು ಅಂಬೇಡ್ಕರ ನಗರವನ್ನು ಕಂದಾಯ ಗ್ರಾಮವನ್ನಾಗಿ ಪರಿವರ್ತಿಸಲು ಒತ್ತಾಯಿಸಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಭಿಯಂತರರ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

ಈ ವೇಳೆ ಬಿಜಾಪುರ ನಗರ ಸ್ಲಂ ಅಬಿವೃದ್ಧಿ ಸಮಿತಿ ಅಧ್ಯಕ್ಷರಾದ ಮುತ್ತು ಬೋವಿ ಮಾತನಾಡಿ, ಕಂದಾಯ ಗ್ರಾಮ ಮಾಡಿದರೆ ಮೂಲಭೂತ ಸೌಕರ್ಯಗಳು ಸರ್ಕಾರದಿಂದ ದೊರೆಯುತ್ತವೆ. ಹಾಗೂ ಅಲ್ಲಿ ವಾಸಿಸುತ್ತಿರುವ ಎಲ್ಲ ನಿವಾಸಿಗಳಿಗೆ ಹಕ್ಕು ಪತ್ರ ದೊರೆಯುತ್ತವೆ.ಕಾರಣಮುಂದಿನ ಕಾರ್ಯಕ್ಕೆ ದಾಖಲಾತಿಗಳು ರವಾನಿಸಬೇಕೆಂದು ಕೋರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪ್ರಲ್ಹಾದ ಪಾಟೀಲ ರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಬದಲ್ಲಿ ಮಿನಾಕ್ಷಿ ಕಾಲೆಬಾಗ, ಭಾರತಿ ಶಿವಣಗಿ, ಲಕ್ಷ್ಮೀಂಬಾಯಿ ಆನೆಕಲ್, ಸ್ಲಂ ಸಮಿತಿ ಸದಸ್ಯರು ಮತ್ತು ಬಿ ಆರ್ ಅಂಬೇಡ್ಕರ ನಗರದ ನಿವಾಸಿಗಳಾದ ಕೃಷ್ಣಾ ಪ್ರಭಾಕರ, ರವಿ ವಾಲಿಕಾರ, ಪ್ರಕಾಶ ಕಳ್ಳೆನ್ನವರ, ಸುಬಾಸ ವಾಲಿಕಾರ, ಮಹಾಂತೇಶ ಸಿಂದ್ರೆ, ವಿಶಾಲ ಪ್ರಭಾಕರ, ಬಾಸ್ಕರ ನಾಗರಳ್ಳಿ, ಅಶೋಕ ವಾಲಿಕಾರ, ಸಾವಿತ್ರಿ ಪುಜಾರಿ, ಶಾಂತಾಬಾಯಿ ಕಳ್ಳೆನ್ನವರ, ಜಾನಕಿ ಕಳ್ಳಿಮನಿ, ಮಹ್ಮದಇಸಾಕ ಜಮಾದಾರ, ಕಾಮಿನಿ ಕಸಬೆ, ಸೇರಿದಂತೆ ಅನೇಕ ಸದಸ್ಯರು ಬಾಗವಹಿಸಿದ್ದರು.

# ನಿಮ್ಮೂರಲ್ಲೇ ಉದ್ಯೋಗ, ಗುಳೆ ಹೋಗುವ ಅಗತ್ಯವಿಲ್ಲ

■ ಉದಯರಶ್ಮಿ ದಿನಪತ್ರಿಕೆ



**■ ಇಂಡಿ ತಾಲೂಕಿನ ವಿವಿಧ ಗ್ರಾ.ಪಂ ಗಳ ವಿಬಿಜಿ ರಾಮ್‌ಜಿ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿದ ಜಿ.ಪಂ. ಸಿಇಓ ರಿಷಿ ಆನಂದ ಕೂಲಿ ಕಾರ್ಮಿಕರಿಗೆ ಅಭಯ**

ವಿಜಯಪುರ: ಬರಗಾಲದ ಸಂದರ್ಭದಲ್ಲಿ ಗ್ರಾಮೀಣ ಕೂಲಿಕಾರರು ಉದ್ಯೋಗ ಅರಸಿ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗದಂತೆ, ಅವ–ರಿಗೆ ಸ್ವಗ್ರಾಮದಲ್ಲಿಯೇ ನಿರಂತರ ಉದ್ಯೋಗಾವಕಾಶ ಕಲ್ಪಿಸಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂಡಿ ತಾಲೂಕಿನ ಬಸನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಟ್ನಾಳ, ಬಬಲಾದ, ಬಳ್ಳೊಳ್ಳಿ ಹಾಗೂ ಇಂಗಳಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾವಿನಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ, ವಿಕಸಿತ ಭಾರತಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕಾ ಮಿಷನ್ (ಗ್ರಾಮೀಣ) ಯೋಜನೆ (ವಿಬಿಜಿ ರಾಮ್‌ಜಿ) ಯಡಿ ಪ್ರಗತಿಯಲ್ಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿ ಅವರು ಮಾತನಾಡಿದರು. ಆರಂಭದಲ್ಲಿ ಬಸನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಟ್ನಾಳ ಗ್ರಾಮದ ಕಾಲುವೆ ಪುನಶ್ಚೇತನ ಕಾಮಗಾರಿ, ಬಬಲಾದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ನಿರ್ಮಾಣ ಹಂತದಲ್ಲಿರುವ ಇಂಗು ಕೆರೆ, ಬಳ್ಳೊಳ್ಳಿ ಗ್ರಾಮದ ಕೆರೆ ಪುನಶ್ಚೇತನ ಕಾಮಗಾರಿ ಹಾಗೂ ಇಂಗಳಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾವಿನಹಳ್ಳಿ ಗ್ರಾಮದ ಕಂದಕ ನಿರ್ಮಾಣ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಕಾಮಗಾರಿಗಳ ಪ್ರಗತಿ ಹಾಗೂ ಗುಣಮಟ್ಟವನ್ನು ಪರಿಶೀಲಿಸಿದರು.

ಗ್ರಾಮೀಣ ಮಹಿಳೆಯರು ಉದ್ಯೋಗಕ್ಕೆ ಬರಲು ಪ್ರೇರೇಪಿಸಬೇಕು. ಗ್ರಾ.ಪಂ. ವ್ಯಾಪ್ತಿಯ ಗ್ರಾಮ ಕಾಯಕ ಮಿತ್ರರು, ಬೇರ್‌ಫುಟ್ ಟೆಕ್ನಿಷಿಯನ್‌ಗಳು, ಕಾಯಕ ಬಂಧುಗಳು, ಕೃಷಿ ಸಖಿಯರು, ಪಶು ಸಖಿಯರು, ಸ್ವ–ಸಹಾಯ ಸಂಘದ ಸದಸ್ಯರು ಹಾಗೂ ಮಹಿಳಾ ಸಂಘಗಳ ಪ್ರತಿನಿಧಿಗಳು ಗ್ರಾಮೀಣ ಜನರಲ್ಲಿ ಯೋಜನೆಯ ಕು–ರಿತು ಜಾಗೃತಿ ಮೂಡಿಸಬೇಕು. ವಿಶೇಷವಾಗಿ ಸ್ವಸಹಾಯ ಸಂಘದ ಮಹಿಳೆಯರು ಹಾಗೂ ಗ್ರಾಮೀಣ ಕುಟುಂಬಗಳು ವಿಬಿಜಿ ರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸಬೇಕು ಎಂದರು. ಪ್ರತಿ ಗ್ರಾ.ಪಂ. ವ್ಯಾಪ್ತಿಯಲ್ಲಿ ಕನಿಷ್ಠ 200 ರಿಂದ 300 ಕೂಲಿಕಾರರಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಯೋಜಿತ ಕ್ರಮಗಳನ್ನು ಕೈಗೊಳ್ಳಬೇಕು ಎಂದರು. ವಿಬಿಜಿ ರಾಮ್‌ಜಿ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರ ಆರೋಗ್ಯದ ಹಿತದೃಷ್ಟಿಯಿಂದ ಇದೇ ಸೆಪ್ಟೆಂಬರ್ ತಿಂಗಳಿನಲ್ಲಿಯೇ ಎಲ್ಲಾ ಗ್ರಾ.ಪಂ. ವ್ಯಾಪ್ತಿಗಳಲ್ಲಿ ಕಾಮಗಾರಿ ಸ್ಥಳಗಳಲ್ಲಿಯೇ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಬೇಕು ಎಂದು ಅಲ್ಲಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ವೇಳೆ ಕೂಲಿಕಾರರೊಂದಿಗೆ ಮಾತನಾಡಿದ ಸಿಇಒ ಅವರು, ಬರಗಾಲದ ಸಂದರ್ಭದಲ್ಲಿ ಉದ್ಯೋಗಕ್ಕಾಗಿ ದೂರದ ಊರುಗಳಿಗೆ ವಲಸೆ ಹೋಗುವ ಬದಲು ತಮ್ಮ ಗ್ರಾಮದಲ್ಲಿಯೇ ಉದ್ಯೋಗ ಪಡೆಯುವಂತೆ ತಿಳಿಸಿದರು.

ವೈಯಕ್ತಿಕ ಕಾಮಗಾರಿಗಳನ್ನು ತಮ್ಮ ಜಮೀನಿನಲ್ಲಿಯೇ ಕೃಷಿ ಹೊಂಡ, ದನದ ಕೊಟ್ಟಿಗೆ, ಕೋಳಿ ಶೆಡ್, ಮೇಕೆ ಶೆಡ್ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕೈಗೊಂಡು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಲು ಅವಕಾಶವಿದೆ ಎಂದರು. ಬಬಲಾದ ಗ್ರಾಮ ಪಂಚಾಯತ ವ್ಯಾಪ್ತಿಯ ಕಾಮಗಾರಿ ಸ್ಥಳದಲ್ಲಿ ಜಿ.ಪಂ. ಸಿಇಓ ರವರೇ ಕೂಲಿ ಕಾರ್ಮಿಕರಿಗೆ ಉಪಹಾರವನ್ನು ಬಡಿಸಿ ಸಂತಸ ವ್ಯಕ್ತಪಡಿಸಿದರು. ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ (ಪಿ.ಎಮ್.ಎಸ್.ಬಿ.ವೈ)ಯ ಫಲಾನುಭವಿಯಾದ ಶ್ರೀಮತಿ ದಾನಮ್ಮ ಸುರೇಶ ಹಂಚನಾಳ ಇವರಿಗೆ ವಿಬಿಜಿ ರಾಮ್‌ಜಿ ಯೋಜನೆಯ ಕಾಮಗಾರಿ ಸ್ಥಳದಲ್ಲಿಯೇ 2 ಲಕ್ಷದ ಪರಿಹಾರ ಮೊತ್ತದ ಚೆಕ್ ಅನ್ನು ಜಿ.ಪಂ.ನ ಸಿಇಓ ರವರು ವಿತರಿಸಿದರು.

ಈ ಸಂದರ್ಭದಲ್ಲಿ ಇಂಡಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಹದೇವಪ್ಪ ಏವೂರ, ಸಹಾಯಕ ನಿರ್ದೇಶಕರು (ಗ್ರಾ.ಉ) ಸಂಜಯ ಖಡೆಗೇಕರ, ಬಬಲಾದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಜಿ. ಪಾರೆ, ಝಳಕಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮಣ ಪಾಟೀಲ, ಬಸನಾಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ನಿಲಂಗಿ, ಇಂಗಳಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಶೈಲ ಬಿರಾದಾರ, ಕೆನರಾ ಬ್ಯಾಂಕ್ನ ಮ್ಯಾನೇಜರ್ ವಿಠ್ಠಲ ಗೌರಿ, ಎಲ್ ಡಿ ಎಂ ಸಿದ್ದಯ್ಯ, ಅಸಿಸ್ಟೆಂಟ್ ನಾಗಪ್ಪ ಮಿಂಚನಾಳ, ಅರ್ಥಿಕ ಸಾಕ್ಷರತಾ ಸಲಹೆಗಾರ ಭರತೇಶ ಉಪಾಧ್ಯೆ, ಸಿ ಎಫ್ ಎಲ್ ಮದರ್ ಎನ್. ಮತ್ತಿತರರು ಇದ್ದರು.

# 'ಪ್ರೊ. ಎಚ್.ಟಿ. ಪೋತೆ ಹಸ್ತಪ್ರತಿ' ಹಾಗೂ 'ಬೆರಗು' ಪುಸ್ತಕ ಪ್ರಶಸ್ತಿಗೆ ಕೃತಿಗಳ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಕಡಣಿ ಗ್ರಾಮದ ಬೆರಗು ಪ್ರಕಾಶನ ಸಂಸ್ಥೆಯು ನೀಡುವ 'ಪ್ರೊ. ಎಚ್.ಟಿ. ಪೋತೆ ವಿಮರ್ಶೆ ಹಸ್ತಪ್ರತಿ' ರಾಜ್ಯಮಟ್ಟದ ಪ್ರಶಸ್ತಿಗೆ ಹಸ್ತಪ್ರತಿಗಳನ್ನು ಹಾಗೂ ದಿ. ಯಮುನಾಬಾಯಿ ರಾಜಣ್ಣ ಭೋವಿ ಸ್ಮರಣಾರ್ಥ ನೀಡುವ 'ಬೆರಗು ಪುಸ್ತಕ ಪ್ರಶಸ್ತಿ'ಗೆ ಪ್ರಕಟಿತ ಕೃತಿಗಳನ್ನು ಆಹ್ವಾನಿಸಿದೆ.

'ಪ್ರೊ. ಎಚ್.ಟಿ. ಪೋತೆ ಹಸ್ತಪ್ರತಿ' ಪ್ರಶಸ್ತಿಯು 10 ಸಾವಿರ ನಗದು, ಪ್ರಶಸ್ತಿ ಫಲಕ ಹಾಗೂ ಸ್ಮರಣಿಕೆಯನ್ನು ಒಳಗೊಂಡಿದೆ. ಮುದ್ರಣಕ್ಕೆ ಸಿದ್ಧವಾದ ವಿಮರ್ಶೆ ಮತ್ತು ವಿಚಾರ ಸಾಹಿತ್ಯಕ್ಕೆ ಸಂಬಂಧಿತ ಹಿನ್ನೆಲೆಯ ಹಸ್ತಪ್ರತಿಗಳನ್ನು ಆಯ್ಕೆಗಾಗಿ ಸಲ್ಲಿಸಬಹುದು. ನುಡಿ ಅಥವಾ ಬರಹ ತಂತ್ರಾಂಶದಲ್ಲಿ ಟೈಪ್ ಮಾಡಿದ ಹಸ್ತಪ್ರತಿಗಳನ್ನು ಸ್ವೀಕರಿಸಲಾಗುವುದು. ಆಸಕ್ತರು ಹಸ್ತಪ್ರತಿಯ ಎರಡು ಪ್ರತಿಗಳನ್ನು ವಿಜಯಲಕ್ಷ್ಮೀ ರಮೇಶ ಕತ್ತಿ, ಪ್ರಕಾಶಕರು, ಬೆರಗು ಪ್ರಕಾಶನ ಸಂಸ್ಥೆ, ವಿನಾಯಕ ನಗರ, ಆಲಮೇಲ 586202, ವಿಜಯಪುರ ಜಿಲ್ಲೆ, ಮೊ. 7795341335 ವಿಳಾಸಕ್ಕೆ ಅಕ್ಟೋಬರ್ 10ರೊಳಗೆ ಕಳುಹಿಸಬೇಕು.

## 'ಬೆರಗು ಪುಸ್ತಕ ಪ್ರಶಸ್ತಿ2025'ಕ್ಕೆ ಪ್ರಕಟಿತ ಕೃತಿಗಳ ಆಹ್ವಾನ

ದಿ. ಯಮುನಾಬಾಯಿ ರಾಜಣ್ಣ ಭೋವಿ ಸ್ಮರಣಾಥ–ರ್ ನೀಡುವ 'ಬೆರಗು ಪುಸ್ತಕ ಪ್ರಶಸ್ತಿ2025'ಕ್ಕೆ 2025ನೇ ಸಾಲಿನಲ್ಲಿ ಪ್ರಕಟವಾದ ಕನ್ನಡ ಸಾಹಿತ್ಯದ ಎಲ್ಲ ಪ್ರಕಾರಗಳ ಕೃತಿಗಳನ್ನು ಆಹ್ವಾನಿಸಲಾಗಿದೆ. ಪ್ರಶಸ್ತಿಯು 5 ಸಾವಿರ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ.ಆಸಕ್ತ ಲೇಖಕರು ತಮ್ಮ ಕೃತಿಯ ಎರಡು ಪ್ರತಿಗಳನ್ನು ಅಕ್ಟೋಬರ್ 10ರೊಳಗೆ ಸಲ್ಲಿಸಬೇಕು. ಪಿಎಚ್.ಡಿ. ಪ್ರಬಂಧಗಳು ಹಾಗೂ ಸಂಪಾದಿತ ಕೃತಿಗಳನ್ನು ಹೊರತುಪಡಿಸಿ, ಕನ್ನಡದಲ್ಲಿ ಪ್ರಕಟವಾದ ಎಲ್ಲ ಪ್ರಕಾರದ ಪುಸ್ತಕಗಳನ್ನು ಪ್ರಶಸ್ತಿಗೆ ಸಲ್ಲಿಸಬಹುದು ಎಂದು ಬೆರಗು ಪ್ರಕಾಶನದ ಪ್ರಕಟಣೆ ತಿಳಿಸಿದೆ.

# ಯುವಕರಲ್ಲಿ ವ್ಯಕ್ತಿತ್ವ ವಿಕಸನಕ್ಕೆ ಆತ್ಮಾನುಸಂಧಾನ ಅಗತ್ಯ: ಪ್ರೊ.ಅರಳಿ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ವ್ಯಕ್ತಿತ್ವ ವಿಕಸನವು ಹೊರಗಿನ ಆಡಂಬರದಿಂದ ರೂಪುಗೊಳ್ಳುವುದಿಲ್ಲ. ಆತ್ಮಾನುಸಂಧಾನ, ಆತ್ಮಾವಲೋಕನ ಹಾಗೂ ಅಂತರಂಗದ ಶುದ್ಧಿಯ ಮೂಲಕವೇ ವ್ಯಕ್ತಿತ್ವದ ನಿಜವಾದ ಅನಾವರಣವಾಗುತ್ತದೆ ಎಂದು ಇಂಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ರವಿಕುಮಾರ ಅರಳಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ (ಐಕಿಂಅ) ಅಡಿಯಲ್ಲಿ ಹಮ್ಮಿಕೊಂಡಿದ್ದ 'ಯುವಕರಲ್ಲಿ ವ್ಯಕ್ತಿತ್ವ ವಿಕಸನದ ಮಹತ್ವ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿಯೊಬ್ಬ ವ್ಯಕ್ತಿಯಲ್ಲೂ ಅಡಗಿರುವ ಸಾಮಥ–ರ್ಯವನ್ನು ಗುರುತಿಸಿ, ಉತ್ತಮ ಮೌಲ್ಯಗಳು, ಶಿಸ್ತು, ಸಮಯಪ್ರಜ್ಞೆ ಹಾಗೂ ಮಾನವೀಯ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ. ವಿದ್ಯಾರ್ಥಿಗಳು ಆತ್ಮವಿಶ್ವಾಸ, ಸಂವಹನ ಕೌಶಲ್ಯ, ನಾಯಕತ್ವ ಗುಣ ಮತ್ತು ಸಾಮಾಜಿ–ಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ಸವಾಲುಗಳನ್ನು ಧೈರ್ಯದಿಂದ ಎದುರಿಸಿ, ಸೋಲನ್ನು ಅನುಭವದ ಪಾಠವನ್ನಾಗಿ ಸ್ವೀಕರಿಸಿದಾಗ ಯಶಸ್ಸು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಸ್. ಹಳೆಮನಿ ಮಾತನಾಡಿ, ಇಂತಹ ವಿಶೇಷ ಉಪನ್ಯಾಸಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿದ್ದು, ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳನ್ನು ರೂಢಿಸಿಕೊಳ್ಳಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಐಕ್ಯೂಎಸಿ ಸಂಯೋಜಕರಾದ ಡಾ. ಆರ್.ಡಿ. ಬೆನಕನಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ರಾಜೇಸಾಬ, ಪ್ರೊ. ಸಿರಾಜ್ ಖಾದ್ರಿ, ಪ್ರೊ. ಕೃಷ್ಣಾರೆಡ್ಡಿ, ಪ್ರೊ. ಸ್ವಾಗತ ಸೇರಿದಂತೆ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ಆಕ್ರೋಶ। ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಕೆ

# ಶಾಸಕರು– ಸಚಿವರು ಈಗ್ಲಾದ್ರೂ ರೈತರ ಪರವಾಗಿ ಧ್ವನಿ ಎತ್ತಲಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ಒಟ್ಟು 13 ತಾಲೂಕುಗಳ ಪೈಕಿ 10 ತಾಲೂಕುಗಳನ್ನು ಬರ ಘೋಷಣೆಯಿಂದ ಹೊರಗಿಟ್ಟಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಧಾರಕ್ಕೆ ಆಮ್ ಆದ್ಮಿ ಪಾರ್ಟಿ ವಿಜಯಪುರ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಸರ್ಕಾರದ ಈ ನಿರ್ಧಾರವು ಜಿಲ್ಲೆಯ ರೈತರ ನಡುವೆ ತಾರತಮ್ಯದ ಭಾವನೆ ಮೂಡಿಸಿದ್ದು, ವಿಜಯಪುರ ಜಿಲ್ಲೆಯ 10 ತಾಲೂಕುಗಳ ರೈತ–ರಿಗೆ ಅನ್ಯಾಯವಾಗುತ್ತಿರುವಾಗ ಜಿಲ್ಲೆಯ ಎಂಟು ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು ಏನು ಮಾಡುತ್ತಿದ್ದಾರೆ?" ಎಂದು ಸೋಲಾಪುರ್ ಪ್ರಶ್ನಿಸಿದ್ದಾರಲ್ಲದೆ, ಈಗ್ಲಾದ್ರೂ ಅವರು ರೈತರ ಪರವಾಗಿ ಧ್ವನಿ ಎತ್ತಲಿ ಎಂದು ಆಗ್ರಹಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಭೋಗೇಶ್ ಸೋಲಾಪುರ್ ಅವರ ನೇತೃತ್ವದಲ್ಲಿ ಆಮ್ ಆದ್ಮಿ ಪಾರ್ಟಿ ವಿಜಯಪುರ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾ–ರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸುವುದರ ಜೊತೆಗೆ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಲಾಯಿತು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR